ಸಂಪುಟ 01 | ಸಂಚಿಕೆ 107 | ಗುರುವಾರ 05 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ರಾಷ್ಟ್ರೀಯ ಬಹು ವ್ಯಕ್ತಿತ್ವ ದಿನ

ರಾಷ್ಟ್ರೀಯ ಬಹು ವ್ಯಕ್ತಿತ್ವ ದಿನವನ್ನು (Multiple Personality Day) ಪ್ರತಿವರ್ಷ ಮಾರ್ಚ್ 5 ರಂದು ಆಚರಿಸಲಾಗುತ್ತದೆ. ಈ ದಿನವು ಡಿಸೋಸಿಯೇಟಿವ್ ಐಡೆಂಟಿಟಿ ಡಿಸಾರ್ಡರ್ (ಆಖಆ) ಎಂಬ ಸಂಕೀರ್ಣ ಮಾನಸಿಕ ಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸಲು, ತಪ್ಪು ಕಲ್ಪನೆಗಳನ್ನು ತೊಡೆದುಹಾಕಲು ಮತ್ತು ಪೀಡಿತರಿಗೆ ಬೆಂಬಲ ನೀಡಲು ಮೀಸಲಾಗಿದೆ. ಇದು ವ್ಯಕ್ತಿಗಳ ಒಳಗಿನ ವಿಭಿನ್ನ ಗುರುತುಗಳನ್ನು ಅರ್ಥಮಾಡಿಕೊಳ್ಳುವ ದಿನವಾಗಿದೆ.

## ಸುಭಾಷಿತ

ಅನುಭವವು ಜಗತ್ತಿನ ಸರ್ವಶ್ರೇಷ್ಠ ಶಿಕ್ಷಕ.
ಉಸಿರಿರುವವರೆಗೂ ಕಲಿಕೆ, ಜ್ಞಾನಾರ್ಜನೆಯೇ
ಜೀವನದ ಗುರಿಯಾಗಿರಲಿ.

ಸ್ವಾಮಿ ವಿವೇಕಾನಂದ

## ದ್ವಿತೀಯ ಪಿಯು ಪರೀಕ್ಷೆ: ಉರ್ದು ವಿಷಯಕ್ಕೆ 16 ವಿದ್ಯಾರ್ಥಿಗಳು ಗೈರು

ನೈಜ್ಯ ದೆಸೆ ನ್ಯೂಸ್

ರಾಯಚೂರು: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 04ರ ಬುಧವಾರ ಉರ್ದು ಹಾಗೂ ಸಂಸ್ಕೃತ ವಿಷಯದ ಪರೀಕ್ಷೆಗಳು ನಡೆದವು. ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ಉರ್ದು ವಿಷಯದ ಪರೀಕ್ಷೆಗೆ 311 ನೋಂದಣೆಯಾಗಿದ್ದು, 295 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 16 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ.




ಸಂಸ್ಕೃತ ವಿಷಯದಲ್ಲಿ ಒಟ್ಟು 252 ನೋಂದಣಿಯಾಗಿದ್ದು, 252 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದು, ಸಂಸ್ಕೃತ ವಿಷಯದಲ್ಲಿ ಯಾವುದೇ ವಿದ್ಯಾರ್ಥಿಗಳು ಗೈರು ಹಾಜರಿ ಇರುವುದಿಲ್ಲ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳ ಮೀಸಲಾತಿಯ ಗೊಂದಲ ಮಲ್ಲಿಕಾರ್ಜುನ್ ಖರ್ಗೆ ಅವರಿಗೆ ಸುದೀರ್ಘ

**ಬೆಂಗಳೂರು: ಒಳ ಮೀಸಲಾತಿಯ ಗೊಂದಲ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರಿಗೆ ಸಚಿವರಾದ ಎಚ್.ಸಿ. ಮಹದೇವಪ್ಪ ಹಾಗೂ ಡಾ.ಜಿ.ಪರಮೇಶ್ವರ್ ಅವರು ಸುದೀರ್ಘ ವಿವರಣೆ ನೀಡಿದ್ದಾರೆ.ಇಂದು ಬೆಳಗ್ಗೆ ಇಬ್ಬರು ಸಚಿವರು ಖರ್ಗೆ ಅವರ ಮನೆಗೆ ಭೇಟಿ ನೀಡಿ ಸುದೀರ್ಘ ಮಾತುಕತೆ ನಡೆಸಿದರು. ಒಳ ಮೀಸಲಾತಿ ವಿಚಾರ ರಾಜ್ಯ ಸರ್ಕಾರಕ್ಕೆ ದೊಡ್ಡ ತಲೆನೋವಾಗಿದೆ. ಸುಮಾರು 30 ವರ್ಷಗಳಿಂದಲೂ ಎಡಗೈ ಸಮುದಾಯ ಒಳ ಮೀಸಲಾತಿಗಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿತ್ತು.**



ಈ ಹಿಂದೆ ನ್ಯಾಯಮೂರ್ತಿ ಸದಾಶಿವ ಆಯೋಗ ನೀಡಿದ್ದ ವರದಿಯನ್ನು 2022ರಲ್ಲಿ ಬಿಜೆಪಿ ಸರ್ಕಾರ ತಿರಸ್ಕರಿಸಿತ್ತು. ಆದರೆ ಆಯೋಗದಲ್ಲಿ ಉಲ್ಲೇಖಿಸಲಾಗಿದ್ದ ಮಾದರಿಯಲ್ಲೇ ನಾಲ್ಕು ವರ್ಗೀಕರಣ ಮಾಡಿ ಮೀಸಲಾತಿಯನ್ನು ಹಂಚಿಕೆ ಮಾಡಲಾಗಿತ್ತು. ಜೊತೆಗೆ ಮೀಸಲಾತಿಯ ಪ್ರಮಾಣವನ್ನು ಶೇ. 15ರಿಂದ 17ಕ್ಕೆ ಹೆಚ್ಚಿಸಲಾಗಿತ್ತು. ರಾಜ್ಯಸರ್ಕಾರದ ಈ ನಿರ್ಧಾರ ಸಂವಿಧಾನದ ಷಡ್ಯೂಲ್ 9ಕ್ಕೆ ಸೇರ್ಪಡೆಯಾಗಿರಲಿಲ್ಲ. ಸಂಸತ್‌ನಲ್ಲೂ ಚರ್ಚೆಯಾಗಿರಲಿಲ್ಲ. ಹೀಗಾಗಿ ಅದು ಊರ್ಜಿತವಾಗುವ ಬಗ್ಗೆ ನಾನಾ ರೀತಿಯ ಅನುಮಾನಗಳಿದ್ದವು. ಈ ನಡುವೆ 2024ರ ಆಗಷ್?ಟ 1ರಂದು ಸುಪ್ರೀಂಕೋರ್ಟ್ ತೀರ್ಪು ನೀಡಿ ಒಳ ಮೀಸಲಾತಿ ವರ್ಗೀಕರಣಕ್ಕೆ ರಾಜ್ಯ ಸರ್ಕಾರಗಳಿಗೆ ಅಧಿಕಾರವಿದೆ ಎಂದು ಸ್ಪಷ್ಟಪಡಿಸಿತ್ತು.

ಅದರ ಆಧಾರದ ಮೇಲೆ ಸಿದ್ದರಾಮಯ್ಯ ಸರ್ಕಾರ ಮೀಸಲಾತಿಯ ವರ್ಗೀಕರಣ ಪ್ರಕ್ರಿಯೆಗಳನ್ನು ಆರಂಭಿಸಿತ್ತು. ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ನೇತೃತ್ವದಲ್ಲಿ ಆಯೋಗ ರಚನೆ ಮಾಡಿ ಸಮರ್ಪಕವಾದ ದತ್ತಾಂಶ ಸಂಗ್ರಹಣೆಗಾಗಿ ಮನೆ ಮನೆ ಸಮೀಕ್ಷೆ ನಡೆಸಿದೆ. ಆದರೆ ಸಮೀಕ್ಷೆಯಲ್ಲಿ ಸಂಗ್ರಹಿಸಿದ ಅಂಕಿ ಅಂಶಗಳ ಬಗ್ಗೆಯೂ ಅನುಮಾನಗಳಿದ್ದು, ನಾಗಮೋಹನ್ ಅವರ ಆಯೋಗದ ಶಿಫಾರಸುಗಳ ಬಗ್ಗೆಯೂ ಬಲಗೈ ಸಮುದಾಯದಿಂದ ಆಕ್ಷೇಪಗಳು ವ್ಯಕ್ತವಾಗಿದ್ದವು. ಅದರ ನಡುವೆಯೇ ರಾಜ್ಯ ಸರ್ಕಾರ ಸಂಪುಟದಲ್ಲಿ ಚರ್ಚೆ ಮಾಡಿ ಮೀಸಲಾತಿ ವರ್ಗೀಕರಣಕ್ಕೆ ನಿರ್ಧಾರ ತೆಗೆದುಕೊಂಡಿತ್ತು. ಆದರೆ ಅಲ್ಲಿ ಬಿಂದು ಮಾದರಿಯನ್ನು ನಿಗದಿ ಮಾಡುವ ವೇಳೆ ಶೋಷಿತರಿಗೆ ಅನ್ಯಾಯ ಮಾಡಲಾಗಿದೆ ಎಂಬ ಆಕ್ಷೇಪಗಳು ಕೇಳಿ ಬಂದಿವೆ. ಈ ಹಿಂದೆ ಬಸವರಾಜ ಬೊಮಾಯಿ ಸರ್ಕಾರ ಅನುಸರಿಸಿದ ಮಾನದಂಡಗಳನ್ನೇ ಪಾಲನೆ ಮಾಡಲಾಗಿದೆ ಎಂದು ಸಿದ್ದರಾಮಯ್ಯ ಅವರ ಸರ್ಕಾರ ಸಮರ್ಥಿಸಿಕೊಳ್ಳುತ್ತಿದೆ.

ಆದರೆ ರಾಜ್ಯಸರ್ಕಾರದ ನಿರ್ಧಾರಕ್ಕೆ ಬಲಗೈ ಸಮುದಾಯ ಹಾಗೂ ಇತರ ಶೋಷಿತ ಅಲೆಮಾರಿ ಜನಾಂಗಗಳು ತೀವ್ರ ವಿರೋಧ ವ್ಯಕ್ತಪಡಿಸಿವೆ. ಪ್ರತಿಭಟನೆ ಕಾವು ಪಡೆಯುತ್ತಿದ್ದಂತೆ ರಾಜ್ಯ ಸರ್ಕಾರ ತನ್ನ ನಿರ್ಧಾರದಿಂದ ಹಿಂದೆ ಸರಿದಿದೆ. ಈ ನಡುವೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಲಕ್ಷಾಂತರ ಹುದ್ದೆಗಳಿಗೆ ನೇಮಕಾತಿ ಕೈಗೊಳ್ಳಬೇಕೆಂದು ಉದ್ಯೋಗ ಆಕಾಂಕ್ಷಿಗಳು ಧಾರವಾಡದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ಒತ್ತಡಕ್ಕೆ ಸಿಲುಕಿದ ರಾಜ್ಯ ಸರ್ಕಾರ ವಿವಾದಿತ ಒಳ ಮೀಸಲಾತಿಯನ್ನು ನೆನೆಗುದಿಯಲ್ಲಿಟ್ಟು 50 ಸಾವಿರ ಹುದ್ದೆಗಳಿಗೆ ನೇಮಕಾತಿ ಮಾಡುವ ನಿರ್ಧಾರವನ್ನು ಸಂಪುಟದಲ್ಲಿ ತೆಗೆದುಕೊಂಡಿದೆ.

## ದೇವದುರ್ಗ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ನೂತನ ಜಿಲ್ಲಾಧ್ಯಕ್ಷರಿಗೆ ಸನ್ಮಾನ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ನೂತನ ಜಿಲ್ಲಾಧ್ಯಕ್ಷರಾಗಿ ನೇಮಕಗೊಂಡಿರುವ ವಿನೋದ್ ರೆಡ್ಡಿ ಅವರಿಗೆ ದೇವದುರ್ಗ ತಾಲೂಕು ಘಟಕದ ವತಿಯಿಂದ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡ ಅವರ ಆದೇಶದಂತೆ ರಾಯಚೂರು ಜಿಲ್ಲೆಗೆ ನೂತನ ಜಿಲ್ಲಾಧ್ಯಕ್ಷರಾಗಿ ವಿನೋದ್ ರೆಡ್ಡಿ ಅವರನ್ನು ನೇಮಕ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ದೇವದುರ್ಗ ತಾಲೂಕು ಘಟಕದ ಪದಾಧಿಕಾರಿಗಳು ಗೌರವ ಸನ್ಮಾನ ಮಾಡಿ ಶುಭಾಶಯ ಕೋರಿದರು.**

ಸನ್ಮಾನ ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯರಾದ ಬಸವರಾಜ್ ಊಕ, ಗ್ರಾಮ ಪಂಚಾಯತ್ ಮಾಜಿ ಸದಸ್ಯರಾದ ಶಂಕ್ರಗೌಡ ಮಾಲಿಪಾಟೀಲ್, ಶರಣು ಸರ್, ಕರವೇ ದೇವದುರ್ಗ ತಾಲೂಕು ಅಧ್ಯಕ್ಷರಾದ ನಂದಪ್ಪ ಪಿ ಮಡ್ಡಿ, ರಂಗಪ್ಪ ಬಂಡಿ, ಕರವೇ ಮುಖಂಡರಾದ ಭೀಮಣ್ಣ ನಾಯಕ (ತಾಲೂಕು ಸಂಚಾಲಕರು),

ಗುರುನಾಥ್ ರೆಡ್ಡಿ (ತಾಲೂಕು ಪ್ರಧಾನ ಕಾರ್ಯದರ್ಶಿ), ತಮ್ಮಣ್ಣ ಹೆರುಂಡಿ (ಜಾಲಹಳ್ಳಿ ಹೋಬಳಿ ಅಧ್ಯಕ್ಷರು), ವೆಂಕಟೇಶ್ ಜಗರಕಲ್ (ಜಾಲಹಳ್ಳಿ ಉಪಾಧ್ಯಕ್ಷರು), ಅಮರೇಶ್ (ಹೋಬಳಿ ಉಪಾಧ್ಯಕ್ಷರು), ಭೀಮಾರಾಯ ಮಕಾಶಿ (ಯುವ ಕಲಚೇತನ ಅಧ್ಯಕ್ಷರು) ಸೇರಿದಂತೆ ಹಲವರು ಉಪಸ್ಥಿತರಿದ್ದರು. ನೂತನ ಜಿಲ್ಲಾಧ್ಯಕ್ಷರಾದ ವಿನೋದ್ ರೆಡ್ಡಿ ಅವರು ಸಂಘಟನೆಯನ್ನು ಇನ್ನಷ್ಟು ಬಲಪಡಿಸುವುದಾಗಿ ತಿಳಿಸಿದರು.

## ರಾಯಚೂರು ಜಿಲ್ಲಾ ನೂತನ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರ-ಸಚಿವ ಎನ್‌ಎಸ್ ಬೋಸರಾಜು ಅವರಿಂದ ಲೋಕಾರ್ಪಣೆ

ನೈಜ್ಯ ದೆಸೆ ನ್ಯೂಸ್

**ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕಾರ್ಯ ಶ್ಲಾಘನೀಯ- ಸಚಿವ ಎನ್ ಎಸ್ ಬೋಸರಾಜು ಸ್ಕೌಟ್ಸ್ ಮತ್ತು ಗೈಡ್ಸ್ ಶಿಸ್ತು ಶಾಂತಿಯ ಸಂಕೇತ- ಎನ್‌ಎಸ್ ಬೋಸರಾಜು ರಾಯಚೂರಿನ ಜಿಲ್ಲಾ ಸ್ಕೌಟ್ ಭವನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದ ಅಡಿಯಲ್ಲಿ ನಿರ್ಮಿಸಲಾದ ಜಿಲ್ಲಾ ನೂತನ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರದ ನೂತನ ಕಟ್ಟಡವನ್ನು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಲೋಕಾರ್ಪಣೆಗೊಳಿಸಿದರು.**



ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಇಂದಿನ ಯುವಕರಲ್ಲಿ ಶಿಸ್ತು ಆತ್ಮವಿಶ್ವಾಸ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುವ ಗುರಿಯನ್ನು ಹೊಂದಿದೆ. ಶಾಂತಿ ಸೌಹಾರ್ದತೆಯೊಂದಿಗೆ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಯುವಕರಲ್ಲಿ ಜಾಗೃತಿ ಮೂಡಿಸುವ ಕೆಲಸ ಈ ಸಂಸ್ಥೆಯಿಂದ ಮಾಡಲಾಗುತ್ತಿದೆ. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನ ಈ ಸೇವೆ ಶ್ಲಾಘನೀಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸ್ಕೌಟ್ಸ್ ಮತ್ತು ಗೈಡ್ ಸಂಸ್ಥೆಯ ಮುಖ್ಯಸ್ಥರಾದ ಪಿಜಿಆರ್ ಸಿಂಧೆ ಕಾಂಗ್ರೆಸ್ ಮುಖಂಡರಾದ ಜಯಣ್ಣ ಜಯವಂತರಾವ್ ಪತಂಗೆ ಶಿವ ಮೂರ್ತಿ ರುದ್ರಪ್ಪ ಅಂಗಡಿ ಬಸವರಾಜ ಪಾಟೀಲ್ ಪ್ರಭಾಕರ್ ಭಟ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ತ್ರಯಂಬಕೇಶ್ವರ ದೇವಸ್ಥಾನದ ನೂತನ ಟ್ರಸ್ಟ್ ಅಧ್ಯಕ್ಷರಾಗಿ ಆಯ್ಕೆಯಾದ ಗಂಗಪ್ಪ ದಿನ್ನಿ ಅವರಿಗೆ ಪಟ್ಟಣದ ಸರ್ವ ಜನಾಂಗದವರಿಂದ ಅದ್ದೂರಿ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ಪಟ್ಟಣದ ಆಧ್ಯಾತ್ಮಿಕ ಪರಂಪರೆಯ ಪ್ರತೀಕವಾಗಿರುವ ತ್ರಯಂಬಕೇಶ್ವರ ದೇವಸ್ಥಾನದ ನೂತನ ಟ್ರಸ್ಟಿ ಅಧ್ಯಕ್ಷರಾಗಿ ಗಂಗಪ್ಪ ದಿನ್ನಿ ಅವರು ಆಯ್ಕೆಯಾಗಿರುವುದು ಭಕ್ತರಲ್ಲಿ ಹೊಸ ಉತ್ಸಾಹವನ್ನು ಮೂಡಿಸಿದೆ. ಈ ಹಿನ್ನೆಲೆ ಪಟ್ಟಣದ ಎಲ್ಲಾ ಸಮುದಾಯದ ಮುಖಂಡರು, ಧಾರ್ಮಿಕ ನಾಯಕರು ಹಾಗೂ ನಾಗರಿಕರು ಒಟ್ಟಾಗಿ ಭವ್ಯ ಸನ್ಮಾನ ಸಮಾರಂಭವನ್ನು ಆಯೋಜಿಸಿದರು.**



ಸನ್ಮಾನ ಕಾರ್ಯಕ್ರಮದಲ್ಲಿ ಪಟಾಕಿ ಸಿಡಿಸಿ, ಹೂಮಾಲೆ ಹಾಕಿ, ಶಾಲು ಹೊದಿಸಿ ಗೌರವಿಸಲಾಯಿತು. ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಅಭಿನಂದನಾ ಮಾತುಗಳ ಮೂಲಕ ಗಂಗಪ್ಪ ದಿನ್ನಿ ಅವರ ಸಾಮಾಜಿಕ ಸೇವೆ, ಸರಳತೆ ಮತ್ತು ಸಂಘಟನಾ ಕೌಶಲ್ಯವನ್ನು ಕೊಂಡಾಡಿದರು. ದೇವಸ್ಥಾನದ ಅಭಿವೃದ್ಧಿಗೆ ಅವರ ನಾಯಕತ್ವ ಮಹತ್ವದ ಪಾತ್ರ ವಹಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಮಾತನಾಡಿದ ಗಂಗಪ್ಪ ದಿನ್ನಿ ಅವರು, ದೇವಸ್ಥಾನವನ್ನು ಇನ್ನಷ್ಟು ಅಭಿವೃದ್ಧಿಪಡಿಸಿ ಭಕ್ತರಿಗೆ ಉತ್ತಮ ಸೌಲಭ್ಯ ಒದಗಿಸುವುದು ತಮ್ಮ ಪ್ರಮುಖ ಗುರಿಯಾಗಿದೆ ಎಂದು ಹೇಳಿದರು.

ಎಲ್ಲ ಸಮುದಾಯದವರ ಸಹಕಾರದಿಂದ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುವ ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಪಟ್ಟಣದ ಹಿರಿಯರು, ಯುವ ಮುಖಂಡರು, ಮಹಿಳೆಯರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶುಭಾಶಯ ಕೋರಿದರು. ಸಮಾರಂಭವು ಸೌಹಾರ್ದತೆ ಮತ್ತು ಏಕತೆಯ ಸಂದೇಶ ಸಾರುವಂತಾಯಿತು.

# ಕಾರುಣ್ಯಾಶ್ರಮವು ಅಂಧ-ಅನಾಥರ ಸುಂದರ ಬದುಕಿನ ಅರಮನೆ: ಸುಜಾತ ಪಿ.ಎಸ್.ಐ ಹೆಸರೇಳದ ಮಾನಸಿಕ ಅಸ್ವಸ್ಥನಿಗೆ ಆಸರೆಯಾದ ಕಾರುಣ್ಯಾಶ್ರಮ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ತುರ್ವಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ತಿಡಿಗೋಳ ಗ್ರಾಮದಲ್ಲಿ ಮಾನಸಿಕ ಅಸ್ವಸ್ಥನಾಗಿ ಸುಮಾರು ಎರಡು ದಿನಗಳಿಂದ ಗ್ರಾಮದಲ್ಲಿ ವಾಸವಾಗಿದ್ದ ಈತನನ್ನು ಊರಿನ ಗ್ರಾಮಸ್ಥರು 112 ಗೆ ಕರೆ ಮಾಡಿ ನಮ್ಮ ಊರಲ್ಲಿ ಅಪರಿಚಿತ ವ್ಯಕ್ತಿ ವಾಸವಾಗಿದ್ದಾನೆ ಎಂದು ತಿಳಿಸಿದಾಗ ತುರ್ವಿಹಾಳ ಠಾಣೆಯ 112 ವಾಹನವು ಹೋಗಿದ್ದು ಸದರಿ ವಾಹನದಲ್ಲಿ ಈತನನ್ನುಕರೆದುಕೊಂಡು ಬಂದು ಠಾಣೆಗೆ ಕರೆತಂದು ಪೊಲೀಸ್ ಸಿಬ್ಬಂದಿಗಳಾದ ನಾಗಪ್ಪ ಮತ್ತು ಅಸ್ಲಾಂ ಇವರುಗಳ ಕರ್ತವ್ಯದಲ್ಲಿ ಇರಿಸಿಕೊಂಡಿದ್ದರು.**




ಈತನನ್ನು ವಿಚಾರಿಸಿದಾಗ ಹೆಸರು ಹೇಳದೆ ಯಾವುದೇ ರೀತಿಯ ಪ್ರತಿಕ್ರಿಯೆ ನೀಡದಿರುವ ಕಾರಣ ಸಿಂಧನೂರು ನಗರದ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾಕ್ಟರ್ ಚನ್ನಬಸಯ್ಯಸ್ವಾಮಿ ಹಿರೇಮಠ ಅವರಿಗೆ ಮಾಹಿತಿ ನೀಡಲಾಯಿತು. ತಕ್ಷಣ ಆಶ್ರಮದ ವಾಹನದೊಂದಿಗೆ ಆಶ್ರಮದ ಸಿಬ್ಬಂದಿಗಳು ಈತನಿಗೆ ಹೋಲಿಸ ಅಧಿಕಾರಿಗಳ ಸಹಕಾರದೊಂದಿಗೆ ಈತನಿಗೆ ಕಟಿಂಗ್ ಮಾಡಿ ಸ್ನಾನ ಮಾಡಿಸಿ ಪಿ.ಎಸ್.ಐ. ಅಧಿಕಾರಿಗಳಾದ ಸುಜಾತ ಅವರ ಸಮಕ್ಷಮದಲ್ಲಿ ಆಶ್ರಮಕ್ಕೆ ಒಪ್ಪಿಸಲಾಯಿತು.

ಈ ಸಂದರ್ಭದಲ್ಲಿ ಪಿ.ಎಸ್.ಐ. ಸುಜಾತ ಮಾತನಾಡಿ ನಮ್ಮ ಠಾಣಾ ವ್ಯಾಪ್ತಿಯಲ್ಲಿ ಇಂತಹ ಮಾನಸಿಕ ಅಸ್ವಸ್ಥರು ಅನಾಥರು ಬುದ್ಧಿಮಾಂದ್ಯರು ಕಂಡುಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರ ಅಹವಾಲನ್ನು ಸ್ವೀಕರಿಸಿ ಕಾರುಣ್ಯ ಆಶ್ರಮಕ್ಕೆ ಸೇರಿಸುತ್ತಿದ್ದೇವೆ. ನಂತರ ಅವರ ಬಗ್ಗೆ ವಿಚಾರಣೆ ಮಾಡಿದಾಗ ಅವರ ಪಕ್ಕ ವಿಳಾಸ ಹಾಗೂ ಕುಟುಂಬ ಇದ್ದಂತಹ ಸಂದರ್ಭದಲ್ಲಿ ಅವರವರ ಮನೆಗೆ ಕಳುಹಿಸುತ್ತೇವೆ. ಇಂತಹ ಸೇವೆಯಲ್ಲಿ ನಮ್ಮ ಇಲಾಖೆಯೊಂದಿಗೆ ಕಾರುಣ್ಯಾಶ್ರಮದ ಸಾಕಾರ ದೊರೆಯುವುದರಿಂದ ನಮ್ಮ ಕರ್ತವ್ಯಕ್ಕೆ ಬಹಳ ಅನುಕೂಲವಾಗುತ್ತಿದೆ. ನಮ್ಮ ಪೊಲೀಸ್ ಇಲಾಖೆಯ ಪ್ರೀತಿಗೆ ಪಾತ್ರವಾಗಿರುವ ಕಾರುಣ್ಯಾಶ್ರಮದ ಸೇವೆ ಶ್ಲಾಘನೀಯ.

ಬಡ ಜಂಗಮರಾಗಿ ತಮ್ಮ ಜೋಳಿಗೆಯ ಮೂಲಕ ಇಂತಹ ಕಾರ್ಯ ಮಾಡುತ್ತಿರುವುದು ಮಾನವೀಯತೆ ಎನ್ನುವ ಪದಕ್ಕೆ ಸಂಪೂರ್ಣ ಅರ್ಥ ಕಲ್ಪಿಸಿಕೊಟ್ಟಿದೆ. ಕಾರುಣ್ಯಾಶ್ರಮವು ಅಂಧ-ಅನಾಥರ ಬಾಳಿನ ಸುಂದರ ಬದುಕಿನ ಅರಮನೆಯಾಗಿ ಸಮಾಜದಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಈ ವ್ಯಕ್ತಿಯ ಪರಿಚಯ ಯಾರಿಗಾದರೂ ಇದ್ದಂತಹ ಸಂದರ್ಭದಲ್ಲಿ ನಮ್ಮ ಠಾಣೆಗೆ ಮಾಹಿತಿ ನೀಡಲು ವಿನಂತಿಸಿಕೊಳ್ಳುತ್ತೇನೆ. ಎಂದು ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಸಮಯದಲ್ಲಿ ನಾಗಪ್ಪ ಪಿ.ಸಿ.ಅಸ್ಲಾಂ ಪಾಷ ಪ್. ಸಿ. ಮಹೇಶ ಬಾಬು ಪಿ. ಸಿ. ಶಂಕರ ನಾಯಕ ವರದಿಗಾರರು.ನವಾಬ್ ಶರೀಫ್ ವರದಿಗಾರರು. ಕನಕರಾಯ ವರದಿಗಾರರು ಎಂ. ಡಿ ಯುನೂಸ್ ಖಾಜಿ ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಹಾಗೂ ತುರುವಿಹಾಳ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಹಲವಾರು ಸಾರ್ವಜನಿಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಬಣ್ಣಾ.. ಬಣ್ಣಾ..!

ಬಣ್ಣ ಬಣ್ಣಗಳಿಂದ
ಬಣ್ಣವಿಟ್ಟು ಬಣ್ಣವಾಡುತ
ಬಣ್ಣವಾಡಿ ಬಣ್ಣವಾಗಿಸುತ
ಬಣ್ಣವಾಗುವ ಬಣ್ಣದ ಹಬ್ಬ.!

ಬಣ್ಣ ಬೀರಿ ಬಣ್ಣ ತೂರಿ
ಬಣ್ಣ ಸೇರಿ ಬಣ್ಣ ಸಾರಿ
ಬಣ್ಣ ಬಣ್ಣನೆ ಬಣ್ಣಗಳಿಂದ
ಬಣ್ಣ ಬಣ್ಣಿಸುವ ಬಣ್ಣದ ಹಬ್ಬ.!

ಬಣ್ಣ ಸುರಿದು ಬಣ್ಣ ಬಳಿದು
ಬಣ್ಣ ತೆರೆದು ಬಣ್ಣ ಬೆಸೆದು
ಬಣ್ಣ ಬೆರೆತು ಬಣ್ಣ ತಳೆದು
ಬಣ್ಣ ಬಯಲ ಬಣ್ಣದ ಹಬ್ಬ.!

ಬಣ್ಣ ಪೊರೆದು ಬಣ್ಣ ಮೆರೆದು
ಬಣ್ಣ ಮರೆತು ಬಣ್ಣ ಬಸಿದು
ಬಣ್ಣ ಕಲೆತು ಬಣ್ಣ ಹೊಳೆದು
ಬಣ್ಣ ಬೆಳಕಿನ ಬಣ್ಣದ ಹಬ್ಬ.!

ಬಣ್ಣದಿಂದ ಬಣ್ಣವಾದ ಬಣ್ಣವೋ
ಬಣ್ಣವಾದ ಬಣ್ಣದಿಂದ ಬಣ್ಣವೋ
ಬಣ್ಣ ಬಣ್ಣ ಮೇಳೈಸಿದ ಬಣ್ಣವೋ
ಬಣ್ಣ ವಿಸ್ಮಯಗಳ ಬಣ್ಣದ ಹಬ್ಬ.!

ಬಣ್ಣ ಬೆರಗೋ ಬಣ್ಣ ಮೆರುಗೋ
ಬಣ್ಣ ಬೆರೆತ ಬಣ್ಣಗಳ ಮಿನುಗೋ
ಬಣ್ಣ ಒಳಗೋ ಬಣ್ಣ ಹೊರಗೋ
ಬಣ್ಣ ಅಯೋಮಯಗಳ ಬಣ್ಣದ ಹಬ್ಬ.!

ಬಣ್ಣ ಬಣ್ಣ ಕನಸಿ ಬಣ್ಣ ಕನವರಿಸಿ
ಬಣ್ಣ ಬಣ್ಣ ನೆನಸಿ ಬಣ್ಣ ನಳನಳಿಸಿ
ಬಣ್ಣ ದೊಂಬಿ ಮನಮನೆಗೆ ಬಣ್ಣದುಂಬಿ
ಜೀವಭಾವ ಬಣ್ಣವಾಗುವ ಬಣ್ಣದ ಹಬ್ಬ.!

ಎ.ಎನ್.ರಮೇಶ್.ಗುಬ್ಬಿ

### ಗುಣಮಟ್ಟದ ಕೆಲಸ ಮತ್ತು ತ್ವರಿತಗತಿಯಲ್ಲಿ ಕೆಲಸ ಮುಗಿಸಿ: ಆರ್ ಬಸನಗೌಡ ತುರವಿಹಾಳ

ನೈಜ್ಯ ದೆಸೆ ನ್ಯೂಸ್

ಮಸ್ಕಿ ತಾಲೂಕಿನ ಜಿನ್ನಾಪೂರು, ಬಸವಣ್ಣ ಕ್ಯಾಂಪ್, ಬಸಾಪುರು, ಗೊಗೆಬಾಳ, ಪಾಮನಕಲ್ಲೂರು ಮತ್ತು ಬೆಂಚಮರಡಿ ಗ್ರಾಮಗಳಲ್ಲಿ ಸಿ ಸಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳಿಗೆ ಶಾಸಕ ಹಾಗೂ ಖಾದಿ ಗ್ರಾಮೋದ್ಯೋಗ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಆರ್ ಬಸನಗೌಡ ತುರ್ವಿಹಾಳ ಅವರು ಭೂಮಿ ಪೂಜೆ ನೆರವೇರಿಸಿ, ಮಾತನಾಡುತ್ತಾ ಜಿನ್ನಾಪೂರು ಗ್ರಾಮದ ಸೇತುವೆ ನಿರ್ಮಾಣಕ್ಕೆ ಮೊತ್ತ 2.70 ಕೋಟಿ ಪಿ ಡಬ್ಲ್ಯೂ ಡಿ ವತಿಯಿಂದ, ನಿರ್ಮಿತಿ ಕೇಂದ್ರದ ವತಿಯಿಂದ ಗೂಗೆಬಾಳ ಮೊತ್ತ 30 ಲಕ್ಷ, ಬಸವಣ್ಣ ಕ್ಯಾಂಪ್ ಮೊತ್ತ 30 ಲಕ್ಷ, ಬಸಾಪುರ ಮೊತ್ತ 35 ಲಕ್ಷ, ಬೆಂಚಮರಡಿ 30 ಲಕ್ಷ ಮೊತ್ತ.



ಜಲಾದಾರೆ ಮತ್ತು ಜೆ ಜೆ ಎಂ ಕಾಮಗಾ-ರಿಯಿಂದ ಗ್ರಾಮಗಳಲ್ಲಿ ರಸ್ತೆಗಳು ಹದಗೆಟ್ಟಿರುವದರಿಂದ 2025-26 ನೇ ಸಾಲಿನ ಕಲ್ಯಾಣ ಕರ್ನಾಟಕ ನಿಧಿಯಿಂದ ಸಿ ಸಿ ರಸ್ತೆ ಅಭಿವೃದ್ಧಿ ಕಾಮಗರಿಗಳನ್ನು ಹಮ್ಮಿಕೊಳ್ಳಲಾಗಿದೆ. ಸೇತುವೆ ಕಾಮಗಾರಿ ಸೇರಿದಂತೆ ಸಿ ಸಿ ರಸ್ತೆ ಕಾಮಗಾ-ರಿಗಳನ್ನು ಗುಣಮಟ್ಟವನ್ನು ಕಾಯ್ದುಕೊಂಡು ತ್ವರಿತಗತಿಯಲ್ಲಿ ಕಾಮಗಾರಿ ಮುಗಿಸಬೇಕು ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಮತ್ತು ಗುತ್ತೇದಾರರಿಗೆ ತಿಳಿಸಿದರು. ಮಸ್ಕಿ ತಾಲೂಕು ಬ್ಲಾಕ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ ಹಾಗೂ ಇನ್ನು ಅನೇಕ ಮುಖಂಡರು, ಅಧಿಕಾರಿಗಳು ಇದ್ದರು.

# ಪ್ರಾರಂಭದ ಹಂತದಲ್ಲಿ ಶ್ರವಣ ದೋಷದ ತಡೆಗಟ್ಟಿ ಹಾಗೂ ಕಿವುಡುತನವನ್ನು ಅಳಿಸಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಷ್ಟ್ರೀಯ ಶ್ರವಣ ದೋಷ ನಿಯಂತ್ರಣ ಮತ್ತು ನಿವಾರಣಾ ವಿಭಾಗ ರಾಯಚೂರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜವಳಗೇರಾ ಇ ವರ ಸಂಯುಕ್ತ ಆಶ್ರಯದಲ್ಲಿ ಶ್ರವಣ ದೋಷ ನಿಯಂತ್ರಣ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.**



ಕಾರ್ಯಕ್ರಮದ ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಎಲ್ಲಾ ವಯೋಮಾನದಲ್ಲಿ ಬರುತ್ತಿರುವ ಶ್ರವಣ ದೋಷಗಳನ್ನು ನಿರ್ಲಕ್ಷ ಮಾಡಬಾರದು ಕಿವುಡುತನವನ್ನು ಆರಂಭದಲ್ಲಿ ಗುರುತಿಸಿ ಪರೀಕ್ಷಿಸಿ, ಚಿಕಿತ್ಸೆ ಪಡೆಯುವುದು ಹುಟ್ಟಿದ ಮಕ್ಕಳಲ್ಲಿ ಕಂಡುಬರುವ ಕಿವುಡುತನವನ್ನು ತಕ್ಷಣ ತಜ್ಞ ವೈದ್ಯರಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಹುಟ್ಟಿದ ಜೋರಾದ ಶಬ್ದಕ್ಕೆ ಎಚ್ಚೆತ್ತು ಕೈಗೊಳ್ಳದಿರುವುದು. ಕಣ್ಣು ಮೀಟುಕಿಸದಿರುವುದು ತಾಯಿಯ ಧ್ವನಿ ಗುರುತಿಸಿದೇ ಹಾಗೂ ಮಗು ಶಬ್ದ ಕಡೆ ಕಣ್ಣುನ್ನು ತಿರುಗಿಸದಿರುವುದು ತಾಯಿ ಕರೆದಾಗ ಪ್ರತಿಕ್ರಿಯೆ ನೀಡಿರುವುದು ಸೂಚನೆಗಳನ್ನು ಅರ್ಥ ಮಾಡಿಕೊಳ್ಳದಿರುವುದು ಇವು ಮಕ್ಕಳಲ್ಲಿ ಹಾಗೂ ವಯಸ್ಕರಲ್ಲಿ ಕಂಡುಬರುವ ಕಿವಿಯ ತೊಂದರೆಗಳು ಕೂಡಲೇ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದರು.

ನಂತರ ಮಾತನಾಡಿದ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳು ಅಂಬಮ್ಮ ಅವರು ಕಿವಿ ಕೇಳಿಸುವುದಿಲ್ಲ. ಕಿವಿ ನೋವು ಕಿವಿ ಸೋರುವುದು ಕಿವಿಯೊಳಗೆ ಗುಂಯ್ ಗುಟ್ಟುವ ಶಬ್ದ ಬರುವುದು ಕಿವಿ ತುರಿಕೆ ಕಿವಿ



ಜುಮ್ಮೆನಿಸುವುದು ತಲೆ ಸುತ್ತು ತಲೆ ನೋವು ವಾಂತಿ ಇವುಗಳ ಶ್ರವಣ ದೋಷದ ತೊಂದರೆಗಳಾಗಿವೆ. ಯಾವುದೇ ವಸ್ತುವನ್ನು ಕಿವಿಯೊಳಗೆ ಹಾಕದಿರುವುದು ಕಿವಿ ಒಳಗಿನ ಗುಗ್ಗೆಯನ್ನು ಪಿನ್ನು ಅಥವಾ ಯಾವುದೇ ವಸ್ತುವಿನಿಂದ ಸ್ವಂತ ತೆಗೆಯಲು ಪ್ರಯತ್ನಿಸುವುದು ಯಾವುದೇ ಕಿವಿಯ ತೊಂದರೆಗಳು ಕಂಡು ಬಂದರೆ ಕೂಡಲೇ ತಕ್ಷಣ ಕಿವಿ ತಜ್ಞರಲ್ಲಿ ಭೇಟಿ ನೀಡಿ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರಾದ ಇಂದ್ರಮ್ಮ ಮತ್ತು ಆಶಾ ಕಾರ್ಯಕರ್ತೆಯರು ಶರಣಮ್ಮ .ತಾಯಿಂದಿರು ಉಪಸ್ಥಿತರಿದ್ದರು.

# ಕೊಂಡಯ್ಯ ನಾಯಕರವರಿಂದ ನೀರಿನ ಅರವಟ್ಟಿಗೆ ಪ್ರಾರಂಭ




ನೈಜ್ಯ ದೆಸೆ ನ್ಯೂಸ್

ಮಾನ್ವಿ: ಇಂದು ನಮ್ಮ ಪಟ್ಟಣದ ಅತ್ಯಂತ ಮಹತ್ವದ ದಿನಗಳಲ್ಲೊಂದು. ಬೇಸಿಗೆಯ ಬಿರುಬಿಸಿಲಿನ ಝಳವನ್ನು ಸಹಿಸಲಾರದೆ ನರಳುವ ಜನತೆಗಾಗಿ ನೀರಿನ ದಾಹವನ್ನು ತಣಿಸಲು ಇಂತ ಸಾಮಾಜಿಕ ಸೇವೆಯನ್ನು ಮಾಡುತ್ತಿದ್ದು ಒಳ್ಳೆಯ ಕಾರ್ಯ ಎಂದು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷರಾದ ರಾಮಣ್ಣ ನಾಯಕ ಉದ್ಘಾಟಿಸಿ ಮಾತನಾಡಿದರು.

ಪಟ್ಟಣದ ಸಂತೆ ಮಾರ್ಕೆಟಿನಲ್ಲಿ ಬುಧುವಾರದಂದು ಕೊಂಡಯ್ಯ ನಾಯಕ ಪ್ರಧಾನ ಕಾರ್ಯದರ್ಶಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ವತಿಯಿಂದ ಪ್ರಾರಂಭವಾಗಿದ್ದು ಶ್ಲಾಘನೀಯ ಕಾರ್ಯ ಎಂದು ಹೇಳಿದರು. ಆಂಜನೇಯ ನಸಲಾಪುರ ಮಾತನಾಡಿ ಬೇಸಿಗೆ ಎಂದರೆ ಬರೀ ಸೆಖೆ ಮಾತ್ರವಲ್ಲ, ನೀರಿನ ಕೊರತೆಯಿಂದ ಜನರು ಪಡುವ ಕಷ್ಟವೂ ಹೌದು. ವಿಶೇಷವಾಗಿ ಕಾರ್ಮಿಕರು, ರಿಕ್ಷಾ ಚಾಲಕರು, ಪಾದಚಾರಿಗಳು ಮತ್ತು ವ್ಯಾಪಾರಸ್ಥರು ಬಿಸಿಲಿನ ಝಳಕ್ಕೆ ಸಿಲುಕಿ ಬಾಯಾರಿಕೆಯಿಂದ ನರಳುವುದನ್ನು ನಾವು ಕಣ್ಣಾರೆ ಕಂಡಿದ್ದೇವೆ.

ಈ ಸಮಸ್ಯೆಗೆ ಸ್ಪಂದಿಸುವ ಸದುದ್ದೇಶದಿಂದ, ಕೊಂಡಯ್ಯ ನಾಯಕರ ಪುಟ್ಟ ಪ್ರಯತ್ನವೇ ಈ ನೀರಿನ ಅರವಟ್ಟಿಗೆ. ಇಲ್ಲಿ ಯಾವುದೇ ವ್ಯಕ್ತಿ, ಜಾತಿ, ಧರ್ಮ, ವರ್ಗದ ಭೇದವಿಲ್ಲದೆ ಎಲ್ಲರೂ ನೀರು ಕುಡಿಯಬಹುದು. ಇದು ಮಾನವೀಯತೆಯ ಸಂಕೇತ ಎಂದು ಹೇಳಿದರು. ಸಾಜೀದ್ ಪಾಷಾ ಮಾತನಾಡಿ ಸಂತೆ ಮಾರ್ಕೆಟ್ ಅಲ್ಲಿ ನೀರಿನ ಅರವಟ್ಟಿಗೆ ಪ್ರಾರಂಭ ಮಾಡಿದ್ದೂ ತುಂಬಾ ಒಳ್ಳೆಯ ಬೆಳವಣಿಗೆಯಾಗಿದೆ. ಸಂತೆಗೆ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು ತುಂಬಾ ಅನುಕೂಲವಾಗುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ನಾಯ್ಡು ನಾಯಕ, ದೇವರಾಜ್ ನಾಯಕ ಅಧ್ಯಕ್ಷರು ಕ.ವಾ.ನಾ.ಮ. ಮಾನ್ವಿ, ಬಸವರಾಜ್ ಸ್ವಾಮಿ, ಮಂಜುನಾಥ ನಾಯಕ, ಉಪೇಂದ್ರ ನಾಯಕ, ವಿರೇಶ ನಾಯಕ, ಚನ್ನಬಸವ ಸ್ವಾಮಿ ಅಧ್ಯಕ್ಷರು ನೆರಳು ಅನಾಥಾಶ್ರಮ ಮಾನ್ವಿ, ಬಸವ ನಾಯಕ,ರಾಜ್ ನಾಯಕ, ಬಸವ ನಾಯಕ, ಶಿವರಾಯ ನಾಯಕ, ಹನುಮೇಶ್ ನಾಯಕ ಸುರೇಶ ನಾಯಕ, ವಿಜಯ್ ನಾಯಕ ಮುಂತಾದವರು ಉಪಸ್ಥಿತರಿದ್ದರು.

# ಕೈವಾರ ತಾತಯ್ಯನವರ ಜಯಂತೋತ್ಸವ ಆಚರಣೆ.

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಮಂಗಳವಾರ ಕಾಲಜ್ಞಾನಿ ಕೈವಾರ ತಾತಯ್ಯನವರ ಜಯಂತೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.**



ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ,ಮುಖ್ಯಗುರುಗಳಾದ ಸಂತೋಷ ಪವಾರ, ಜವಳಗೇರಿ,ದೈಹಿಕ ಶಿಕ್ಷಕ ಬಸವರಾಜ ಚಳಗಿ,ಶಾಂತಗೌಡ ಬಿರಾದಾರ, ಸಂಜು ಕುಮಾರ ರಾಠೋಡ, ಬಸವರಾಜ ಸವದತ್ತಿ, ರವಿಕುಮಾರ , ರವಿಕುಮಾರ ಮಲಾಬಾದಿ, ರಸೂಲಸಾ ತುರ್ಕಣಗೇರಿ, ಸಿದ್ದನಗೌಡ ಮುದ್ನೂರ, ಭೀಮನಗೌಡ ಸಾಸನೂರ, ಚೇತನ ನಾವದಗಿ, ಸವಿತಾ ಅಸ್ಕಿ,ಶಿವಲೀಲಾ ಚುಂಚೂರು, ರೂಪ ಪಾಟೀಲ, ಸಂಗಮೇಶ ಬಿರಾದಾರ, ಸಂಗೀತ ಬಿರಾದಾರ, ಮೇಘಾ ಪಾಟೀಲ, ಬೋರಮ್ಮ ಉಕ್ಕಲಿ, ಅನಿತಾ ಚೌದ್ರಿ, ಜ್ಯೋತಿ ಪೋಲಿಸ್ ಪಾಟೀಲ, ಶ್ರುತಿ ಚೌದ್ರಿ,ರಾಜಬಿ ಬಿದರಿ, ನಾಗರತ್ನ ಮೈಲೇಶ್ವರ,ಶಿವಕುಮಾರ ಕುಂಬಾರ, ಹೀನಾ ಸನದಿ, ದೇವೇಂದ್ರ ಗುಳೆದ, ಮುಬಾರಕ ಬನ್ನಟ್ಟಿ,ದೇವರಾಜ ದೇಸಾಯಿ, ಸುಮಾ ಹಿರೇಮಠ, ಪ್ರತಿಭಾ ಗುಬ್ಬೇವಾಡ, ಗುರುದೇವಿ ಮಡಿವಾಳರ, ಜೈಯಶ್ರೀ ಹದಿಮೂರ, ಜೈರಾಬಿ ಮುಲ್ಲಾ ಸರ್ವ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಾಜೇಂದ್ರ ಒಡೆಯರ್ ಶಿವಾಚಾರ್ಯರಿಗೆ ಗೌರವ ಸಮರ್ಪಣೆ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ನಾವದಗಿ ಗ್ರಾಮ ಬ್ರಹನ್ಮಠದ ಷ.ಬ್ರ.ಶ್ರೀ ರಾಜ ಗುರು ರಾಜೇಂದ್ರ ಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವದಲ್ಲಿ ಪರಮ ಪೂಜ್ಯರು ರಾಜೇಂದ್ರ ಒಡೆಯರ್ ಶಿವಾಚಾರ್ಯರಿಗೆ ಗೌರವ ಸಮರ್ಪಣೆ ಸಲ್ಲಿಸಿದರು.**

ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಕೊಡೆಕಲ್ಲದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ವೀರಶೈವ ಲಿಂಗಾಯತ ಧರ್ಮದಲ್ಲಿ ಗುರುವಿಗೆ ಶ್ರೇಷ್ಠ ಗೌರವದ ಸ್ಥಾನವನ್ನು ನೀಡಿದ್ದು ಗುರುವಿಲ್ಲದೆ ಮನುಷ್ಯನ ಮೋಕ್ಷ ಅಸಾಧ್ಯ ಎಂದು ಹೇಳಲಾಗಿದೆ. ಪೂಜ್ಯ ರಾಜೇಂದ್ರ ಶರಣರು ಈ ಭಾಗದಲ್ಲಿ ಭಕ್ತರನ್ನು ಆಧ್ಯಾತ್ಮಿಕವಾಗಿ ಸಂಸ್ಕರಿಸಲು ನಿರಂತರ ಪ್ರಯತ್ನಿಸುತ್ತಿದ್ದಾರೆ ಅವರೊಬ್ಬ ಸರಳ ಎಲ್ಲರ ಸಂಪ್ರೀತಿಗೆ ಪಾತ್ರರಾದ ಗುರುಗಳಾಗಿದ್ದಾರೆ.

ಅವರನ್ನು ಇಂದು ನಾವೆಲ್ಲರೂ ಗೌರಿಸುವಂತಹ ಕೆಲಸ ಮಾಡುತ್ತಿದ್ದೇವೆ ಮುಂದಿನ ದಿನಗಳಲ್ಲಿ ಎಲ್ಲ ಭಕ್ತಾದಿಗಳು ಅವರ ಮೇಲೆ ಇದೇ ರೀತಿಯ ಶ್ರದ್ಧೆ ಪ್ರೀತಿ ಹಾಗೂ ಭಕ್ತಿಯನ್ನಿಟ್ಟು ತನು ಮನ ಧನದಿಂದ ಸಹಕರಿಸಬೇಕು ಎಂದರು. ಸಾಸನೂರ ತುಂಬಿಗೀಯ ಪೂಜ್ಯ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ದೇವದುರ್ಗದ ಪರಮ ಪೂಜ್ಯರಾದ ಕಪಿಲ ಸಿದ್ಧರಾಮ ಶಿವಾಚಾರ್ಯರು, ಚಬನೂರಿನ ಜ್ಯೋತಿಷ್ಯ ರತ್ನ ರಾಮಲಿಂಗಯ್ಯ ಮಹಾಸ್ವಾಮಿಗಳು, ದೇವರ ಹಿಪ್ಪರಗಿ ಪರದೇಶಿ ಮಠದ ಶಿವಯೋಗಿ ಶಿವಾಚಾರ್ಯರು, ಕಲ್ಮಠದ ಸಿದ್ಧಲಿಂಗ ದೇವರು, ಮಾತೋಶ್ರೀ ಸಾವಿತ್ರಿ ಅಮ್ಮನವರು,ಡಾ. ಗುರುಲಿಂಗಯ್ಯ ಹಿರೇಮಠ,ಶರಣಗೌಡ ಇಬ್ರಾಹಿಂಪೂರ,ರವಿಧಣಿ ದೇಶಮುಖ,-ಎಸ್.ಎಸ್.ಹಾವರಗಿ,ಪುರಾಣಿಕ ರಾಚಯ್ಯ ಹಿರೇಮಠ,ಡಾ.ಸೋಮಶೇಖರಯ್ಯ ಹಿರೇಮಠ, ಸಾಹಿತಿ ಬಸವರಾಜ ಗೊರಜಿ ಮತ್ತಿತರರು ಇದ್ದರು.


# ನಶಾ ಮುಕ್ತ ಭಾರತ ಅಭಿಯಾನದ ಬೃಹತ್ ವಾಕಥಾನ್‌ಗೆ ಸಚಿವರಿಂದ ಚಾಲನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚುರು ಜಿಲ್ಲಾ ವ್ಯಾಪ್ತಿಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕಕ್ಕೆ ಸಂಂ-ಯೋಜನೆಗೊಳಪಟ್ಟಿರುವ ಕಾಳೇಜುಗಳ ಸಂಘ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ದಿಶಾಭೋದ್ ಪೌಂಢೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದೊಂದಿಗೆ ಸ್ವಾಸ್ಥ್ಯಂ ಭಾರತ, ಶ್ರೇಷ್ಠ ಭಾರತ, ಯುವ ಶುದ್ಧಿ ಅಭಿಯಾನ ಅಂಗವಾಗಿ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್, ಅಂಗಾಂಗ ದಾನ ಅಭಿಯಾನ ಮತ್ತು ವಾಕಥ-ಾನ್‌ಗೆ ಮಾರ್ಚ್ 6ರ ಬೆಳಿಗ್ಗೆ 7.30ಕ್ಕೆ ನಗರದ ಜಿಲ್ಲಾ ಪೊಲೀಸ್ ಮೈದಾನದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಚಾಲನೆ ನೀಡುವರು.**

ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 108 ಶ್ರೀ ಸುಬುಧೇಂದ್ರ ತೀಥ-ರ್ರು ಕಾರ್ಯಕ್ರಮದ ಸಾನ್ನಿಧ್ಯ ವಹಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಧ್ವಜಾರೋಹಣ ನೆರವೇರಿಸುವರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಸಿ.ಭಗವಾನ್ ಅವರು ಪ್ರತಿಜ್ಞಾವಿಧಿ ಬೋಧನೆ ಮತ್ತು ದಿಕ್ಸೂಚಿ ಭಾಷಣ ನೀಡಲಿದ್ದಾರೆ. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ,



ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಹಾಗೂ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ,

ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ

ಜುಬಿನ್ ಮೊಹಪಾತ್ರ, ಭಾರತ ಸರ್ಕಾರದ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ನಿರೀಕ್ಷಕರಾದ ವಿಕಾಸ್ ಸಿಂಗ್, ದಿಶಾಭೋದ್ ಪೌಂಡೇಶನ್ ಡಾ.ಹರ್ಷ ಹರ್ದಾರ್, ಎಸ್.ಪಿ.ಚಿದಾನಂದ್ ಸೇರಿದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕಾರಿಗಳು, ಸಿಬ್ಬಂದಿಗಳ ವರ್ಗ, ಸೆನೆಟ್, ಸಿಂಡಿಕೇಟ್, ಅಕೆಡೆಮಿಕಲ್ ಕೌನ್ಸಿಲ್ ಸದಸ್ಯರು ಹಾಗೂ ರಾಯಚೂರು ಜಿಲ್ಲಾ ವ್ಯಾಪ್ತಿಯ ವಿಶ್ವವಿದ್ಯಾಲಯದ ಸಂಯೋಜನೆಗೊಳಪಟ್ಟಿರುವ ಕಾಲೇಜುಗಳ ಆಡಳಿತ ಮಂಡಳಿ, ಅಧ್ಯಕ್ಷರು, ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

## ನೇಮಕಾತಿ ಪ್ರಕಟಣೆ

IRCTC ನೇಮಕಾತಿ 2026–43 ಹಾಸ್ಪಿಟಾಲಿಟಿ ಮಾನಿಟರ್ ಹುದ್ದೆಗಳಿಗೆ ವಾಕ್–ಇನ್ ಸಂದರ್ಶನ IRCTC ನೇಮಕಾತಿ 2026: 43 ಹಾಸ್ಪಿಟಾಲಿಟಿ ಮಾನಿಟರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಭಾರತೀಯ ರೈಲ್ವೆ ಅಡುಗೆ ಮತ್ತು ಪ್ರವಾಸೋದ್ಯಮ ನಿಗಮವು ಮಾರ್ಚ್ 2026 ರ IRCTCಅಧಿಕೃತ ಅಧಿಸೂಚನೆಯ ಮೂಲಕ ಹಾಸ್ಪಿಟಾಲಿಟಿ ಮಾನಿಟರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಒಡಿಶಾ, ಛತ್ತೀಸ್‌ಗಢ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 13–ಮಾರ್ಚ್–2026 ರಂದು ವಾಕ್–ಇನ್–ಇಂಟರ್ವ್ಯೂಗೆ ಹಾಜರಾಗಬಹುದು. ಅಧಿಸೂಚನೆ ಬಿಡುಗಡೆ ದಿನಾಂಕ: 01–03–2026 ವಾಕ್–ಇನ್ ದಿನಾಂಕ: 13–ಮಾರ್ಚ್–2026 ವಾಕ್–ಇನ್ ಸಂದರ್ಶನವು 12 ಮತ್ತು 13 ಮಾರ್ಚ್ 2026 ರಂದು ನಡೆಯಲಿದೆ ಅಧಿಕೃತ ವೆಬ್‌ಸೈಟ್: irctc.com

## ಕಾರುಣ್ಯಾಶ್ರಮದಲ್ಲಿ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಜಯಂತೋತ್ಸವ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಮಾ 4 ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂಧ್ಯ ಆಶ್ರಮದಲ್ಲಿ ಅಕ್ಷಯ ಆಹಾರ ಜೋಳಿಗೆ ಟ್ರಸ್ಟ್ (ರಿ)ಸ್ವಾಮಿ ಟೇಬಲ್ ಟ್ರಸ್ಟ್ (ರಿ) ಬೆಳಕು ಸಾಹಿತ್ಯ ಮತ್ತು ಸಾಂಸ್ಕೃತಿಕ ಶೈಕ್ಷಣಿಕ ಸಂಸ್ಥೆ (ರಿ) ಇವರುಗಳ ಸಂಯುಕ್ತಾಶ್ರಯದಲ್ಲಿ ಪ್ರತಿ ವರ್ಷದಂತೆ ಕಾರುಣ್ಯಾಶ್ರಮದಲ್ಲಿ ಗದುಗಿನ ವೀರೇಶ್ವರ ಪುಣ್ಯಾಶ್ರಮದ ಲಿಂಗೈಕ್ಯ ಡಾ. ಪಂಡಿತ ಪುಟ್ಟರಾಜ ಗವಾಯಿಗಳ 112ನೇ ವರ್ಷದ ಜಯಂತೋತ್ಸವ ಕಾರ್ಯಕ್ರಮವನ್ನು ಶ್ರೀಗಳ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು.**



ಈ ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ತುರ್ವಿಹಾಳ ಪೊಲೀಸ್ ಠಾಣೆಯ ಪಿ.ಎಸ್.ಐ.ಗಳಾದ ಸುಜಾತ ಅವರು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ನಂತರ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ನಮ್ಮ ಈ ಕಾರುಣ್ಯ ಕುಟುಂಬ ಹುಟ್ಟಿದ್ದೇ ಪುಟ್ಟರಾಜ ಗವಾಯಿಗಳ ಆಶೀರ್ವಾದದೊಂದಿಗೆ. ಆಶ್ರಮದ ಸೇವೆಗೆ ಬಹುದೊಡ್ಡ ಶಕ್ತಿಯಾಗಿ ನಮಗೆ ನಡೆದಾಡುವ ದೇವರಾಗಿ ವಿಶ್ವ ಕಂಡರಿಯದಂತಹ ಅಂದ ಅನಾಥರ ಬಾಳಿನ ಬೆಳಕಾಗಿದ್ದರು ಪುಟ್ಟರಾಜ ಗವಾಯಿಗಳು ಇಂತಹ ಪುಣ್ಯಾತ್ಮರನ್ನು ನಿರಂತರ ಪೂಜಿಸುವುದು ಪ್ರಾರ್ಥನೆಯ ಮೂಲಕ ಆಶ್ರಯದಾತರುಗಳಿಗೆ ಆಯಸ್ಸು ಆಯುರಾರೋಗ್ಯ ಕರುಣಿಸು ತಂದೆ ಎನ್ನುವ ನಿರಂತರ ಪ್ರಾರ್ಥನೆ ಕಾರುಣ್ಯ ಕುಟುಂಬದ್ದು.


ಲಿಂಗೈಕ್ಯ ಡಾ. ಪಂಡಿತ ಪುಟ್ಟರಾಜ ಗವಾಯಿಗಳು ನಮ್ಮ ಸೇವೆಗೆ ಸ್ಫೂರ್ತಿಯಾಗಿದ್ದಾರೆ. ಅಂಧ–ಅನಾಥರ ಬಾಳಿಗೆ ಬೆಳಕಾಗಿದ್ದವರು ನಮ್ಮ ಗದುಗಿನ ಪುಟ್ಟರಾಜರು ಮಾನವ ಧರ್ಮದ ಸಮಾನತೆಯ ಹ–ರಿಕಾರರಾಗಿ ಅದೆಷ್ಟು ಅಂಧರಿಗೆ ಬೆಳಕು ಚೆಲ್ಲಿದ ಈ ಪವಾಡ ಪುರುಷರು ತ್ರಿವಿಧ ದಾಸೋಹಿ ಮೂರ್ತಿಗಳಾಗಿ ಇತಿಹಾಸದಲ್ಲಿ ಉಳಿದಿದ್ದಾರೆ.

ನಮ್ಮ ಕಾರುಣ್ಯ ಆಶೀರ್ವಾದದಲ್ಲಿ ಇವರು ನಡೆದಾಡುವ ದೇವರುಗಳಾಗಿ ದಿನಾಲು ಕೂಡ ನಮಗೆ ಆಶೀರ್ವದಿಸುತ್ತಿದ್ದಾರೆ ಎನ್ನುವ ನಂಬಿಕೆ ನಮ್ಮೆಲ್ಲರಲ್ಲಿ ಇದೆ ಇವರ ಆಶೀರ್ವಾದ ಸದಾವಕಾಲ ನಮ್ಮೆಲ್ಲರ ಮೇಲಿರಲಿ ಎನ್ನುವುದು ನಮ್ಮ ಸಂಕಲ್ಪವಾಗಿದೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ ಮೀನಾಕ್ಷಮ್ಮ. ಲಕ್ಷ್ಮಮ್ಮ ಹಾಗೂ ಆಶ್ರಮದ ಆಶ್ರಯದಾತರುಗಳು ಭಾಗವಹಿಸಿದ್ದರು.

## ವಿಕಲಚೇತನರಿಗೆ ಸಂಬಂಧಪಟ್ಟ ಸಂಸ್ಥೆಗಳಿಂದ ನೋಂದಣಿಗೆ ಸೂಚನೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ವಿಕಲಚೇತನರಿಗೆ ಸಂಬಂಧಪಟ್ಟ ಚಟುವಟಿ–ಕೆಗಳು/ ಕೇಂದ್ರಗಳಾದ ವಿಶೇಷ ಶಾಲೆಗಳು, ಫಿಜಿಯೋ ಥೆರಪಿ ಕೇಂದ್ರಗಳು, ತರಬೇತಿ ಕೇಂದ್ರಗಳು, ವಸತಿ ನಿಲಯಗಳು ಸೇ–ರಿದಂತೆ ಇನ್ನಿತರ ಕೇಂದ್ರಗಳನ್ನು ನಡೆಸುತ್ತಿರುವ ಸಂಸ್ಥೆಗಳು ವಿಕಲಚೇತನರ ಹಕ್ಕುಗಳ ಅಧಿನಿಯಮ ಕಾಯ್ದೆ 2016ರಡಿ ಕಡ್ಡಾಯವಾಗಿ ಸೇವಾ ಸಿಂಧು ಆನ್‌ಲೈನ್ ತಂತ್ರಾಂಶದಿಂದ ನೋಂದಣಿ ಮಾಡಿಕೊಳ್ಳಬೇಕೆಂದು ಕೋರಲಾಗಿದೆ.**



ಹಿರಿಯ ನಾಗರಿಕರಿಗೆ ಸಂಬಂಧಪಟ್ಟ ಚಟುವಟಿಕೆಗಳು/ ಕೇಂದ್ರಗಳನ್ನು ನಡೆಸುತ್ತಿರುವ ಸಂಸ್ಥೆಗಳು ಹಿರಿಯ ನಾಗ–ರಿಕರ ಸಂರಕ್ಷಣಾ ಕಾಯ್ದೆ 2007ರಡಿ ಕಡ್ಡಾಯವಾಗಿ ಸೇವಾ ಸಿಂಧು ಆನ್‌ಲೈನ್ ತಂತ್ರಾಂಶದಿಂದ ನೋಂದಣಿ ಮಾಡಿಕೊಳ್ಳತಕ್ಕದ್ದು.

ಈ ಕಾಯ್ದೆಗಳನ್ವಯ ನೋಂದಣಿ ಮಾಡಿಸಿಕೊಳ್ಳದೇ ಇದ್ದಲ್ಲಿ ಅಂತಹ ಸಂಸ್ಥೆಗಳ ಮೇಲೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, # 1–3–1411/4, ಆಶಾಪೂರ್ ರಸ್ತೆ, ಆಫೀರ?ಸ್ ಕಾಲೋನಿ ಎದುರುಗಡೆ ಶ್ರೀರಾಜಮಾತಾ ಗುಡಿ ಹತ್ತಿರ, ರಾಯಚೂರಿಗೆ ಭೇಟಿ ನೀಡಬಹುದಾಗಿದೆ. ಅಥವಾ ದೂರವಾಣಿ ಸಂಖ್ಯೆ:–08532 200992ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸಿಷ್ಠಧಾಮದಲ್ಲಿ ಚಂದ್ರಗ್ರಹಣ ಶಾಂತಿ ಹೋಮ



**ನೈಜ್ಯ ದೆಸೆ ನ್ಯೂಸ್**

**ಸನಾತನ ಹಿಂದೂ ಧರ್ಮದ ಹಬ್ಬಗಳ ಆಚ–ರಣೆಗಳಲ್ಲಿ ಮತ್ತು ಸಂಪ್ರದಾಯಗಳಲ್ಲಿ ಸಾಮಾನ್ಯವಾಗಿ ವಿಜ್ಞಾನವು ಅಡಕವಾಗಿದೆ. ಪೂಜೆ ಪುನಸ್ಕಾರಗಳಿಂದ ಜೀವನದಲ್ಲಿ ಬರುವ ಸುಖ ದುಖಃ ಮನೋ ನಿಯಂತ್ರಣವಾಗಿ ಜೀವನದ ಸಾಧನೆಯಲ್ಲಿ ತೊಡಗಿಕೊಳ್ಳುವಂತೆ ಮಾಡುತ್ತದೆ.**

ಪ್ರಕೃತಿಯಲ್ಲಿ ಗ್ರಹಣಗಳು ಸಂಭವಿಸಿದಾಗ ಹೋಮ, ಹವನ ಪೂಜೆ ಆಚರಣೆ ಮಾಡುವುದರಿಂದ ಜನಸಾಮಾನ್ಯರಿಗೆ ಹಾಗೂ ದೇಶಕ್ಕೆ ಬರುವಂತ ಅತಿವೃಷ್ಠಿ ಅನಾವೃಷ್ಠಿಗಳನ್ನು ಪಾರು ಮಾಡಬಹುದು ಎಂಬ ಪ್ರತೀತಿ ಇದೆ ಎಂದು ವಶಿಷ್ಠಧಾಮ ಸೇವಾ ಟ್ರಸ್ಟ್‌ನ ಅಧ್ಯಕ್ಷ ಭೀಮಸೇನಾಚಾರ್ಯ ನವಲಿ ಹೇಳಿದರು. ಅವರು ಸಿಂಧನೂರು ನಗರದ ಉಪ್ಪಾರವಾಡಿಯ ವಶಿಷ್ಠಧಾಮದಲ್ಲಿ ಲೋಕಕಲ್ಯಾಣಾರ್ಥವಾಗಿ ಜರುಗಿದ ಚಂದ್ರಗ್ರಹಣ ಹೋಮ ಶಾಂತಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಮಾತನಾಡಿ ಜನಸಾಮಾನ್ಯರು ನಿರಂತರವಾಗಿ ಧಾರ್ಮಿಕ ಆಚರಣೆಗಳು ಆಚರಿಸುವ ಮೂಲಕ ಅರೋಗ್ಯ ಐಶ್ವರ್ಯ ಪಡೆಯಬಹುದಾಗಿದೆ, ಆಗಾಗ ಸಂಭವಿಸುವ ಗ್ರಹಣ ಸಮಯದಲ್ಲಿ ಭಗವಂತನಲ್ಲಿ ಪ್ರಾರ್ಥಿಸುವುದು ಹೋಮ ಹವನ ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದರು.

ವಸಿಷ್ಠಧಾಮ ಟ್ರಸ್ಟ್‌ನ ಕಾರ್ಯದರ್ಶಿ ಭಾರದ್ವಾಜ ಉಪ್ಪಳ ಅವರು ಲೋಕಕಲ್ಯಾಣಕ್ಕಾಗಿ ನಡೆದ ಚಂದ್ರ ಗ್ರಹಣ ಶಾಂತಿ ಹೋಮ ಕಾರ್ಯಕ್ರಮವನ್ನು ನೇರವೇರಿಸಿ, ಉಪನ್ಯಾಸ ನೀಡಿದರು. ವಶಿಷ್ಠಧಾಮ ಗುರುಕುಲ ಮಕ್ಕಳಿಂದ ಭಗವದ್ಗೀತಾ ಶ್ಲೋಕ ಪಾರಾಯಣ, ಈರಮ್ಮ, ಶೋಭಾ ನವಲಿ, ಪದ್ಮಾವತಿ ಗೋಮರ್ಸಿ, ಲಕ್ಷ್ಮಿ, ಸುಮಿತ್ರಾ ಮುಂತಾದವ–ರಿಂದ ಭಜನಾಕಾರ್ಯಕ್ರಮ ಜರುಗಿತು. ಈ ಸಮಯದಲ್ಲಿ ನಗರಸಭೆಯ ಸದಸ್ಯ ಹನಮೇಶ ಕುರಕುಂದಿ, ರೈತ ಮುಖಂಡ ಗೌಡಪ್ಪಗೌಡ ಗುಂಜಳ್ಳಿ, ವಿರುಪಣ್ಣ ಗುಡಿ, ಉಮೇಶ ಗೋಮರ್ಸಿ, ಬಸವರಾಜ ಕೆಸರಟ್ಟಿ, ಉಮೇಶರಾವ್ ಪವಾರ, ವೆಂಕಟೇಶ ಸಾ ಪೋತ್ನಾಳ, ಬಸವರಾಜ ನಾಯಕ, ಗಂಧಿ ವೆಂಕೋಬಣ್ಣ ಶ್ರೇಷ್ಠಿ ಮಲ್ಕಾಪುರ, ಅವಿನಾಶ್ ದೇಶಪಾಂಡೆ ಮುಂತಾದವರು ಉಪಸ್ಥಿತರಿದರು.

## ಪುಸ್ತಕ ಆಯ್ಕೆ ಪಟ್ಟಿ ಪ್ರಕಟ, ಆಕ್ಷೇಪಣೆ ಸಲ್ಲಿಸಲು ಅವಕಾಶ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: 2022ನೇ ವರ್ಷದಲ್ಲಿ ಪ್ರಥಮ ಮುದ್ರಣಗೊಂಡು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಪುಸ್ತಕಗಳ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಪಟ್ಟಿಯನ್ನು ಜಿಲ್ಲಾ, ನಗರ ಕೇಂದ್ರ ಗ್ರಂಥಾಲಯಗಳ ಕಚೇರಿಗಳಲ್ಲಿ ಹಾಗೂ ಇಲಾಖೆಯ ಅಧಿಕೃತ ವೆಬ್‌ಸೈಟ್ ವಿಳಾಸ: ತಿwww.dpl.karnataka.gov.in ನಲ್ಲಿ ಮಾರ್ಚ್ 02 ರಂದು ಪ್ರಕಟಿಸಲಾಗಿದೆ.**



ಆಯ್ಕೆಯಾದ ಪುಸ್ತಕಗಳ ಪಟ್ಟಿಯಲ್ಲಿರುವ ಲೇಖಕರು, ಲೇಖಕ – ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಮಾರಾಟಗಾರರು ತಮ್ಮ ಪುಸ್ತಕಗಳಿಗೆ ಸಂಬಂಧಿಸಿದ ಪುಸ್ತಕದ ಶೀರ್ಷಿಕೆ, ಲೇಖಕರ, ಪ್ರಕಾಶಕರ ಹೆಸರು, ಮುಖ ಬೆಲೆ (ನಿಗದಿತ ಬೆಲೆಯಲ್ಲಿ ವ್ಯತ್ಯಾಸವಿದ್ದಲ್ಲಿ), ಪುಸ್ತಕದ ಅಳತೆ ಮತ್ತು ಪುಟಗಳ ಸಂಖ್ಯೆ ಅಥವಾ ಇತರ ಯಾವುದೇ ತಾಂತ್ರಿಕ ವ್ಯತ್ಯಾಸಗಳಿದ್ದಲ್ಲಿ ತಮ್ಮ ಆಕ್ಷೇಪಣೆ ಅಥವಾ ತಿದ್ದುಪಡಿಗಳನ್ನು ಅಧಿಕೃತ ಮಾಹಿತಿ, ದಾಖಲೆಗಳೊಂದಿಗೆ ಮಾರ್ಚ್ 16ರ ಸಂಜೆ 5.30ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ. ಅಂಬೇಡ್ಕರ್ ವೀದಿ, ಬೆಂಗಳೂರು 560001 ಇಲ್ಲಿಗೆ ಲಿಖಿತವಾಗಿ ಆಕ್ಷೇಪಣೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ರಾಯಚೂ–ರಿನ ನಗರ ಕೇಂದ್ರದ ಮುಖ್ಯ ಗ್ರಂಥಾಲಯಾಧಿಕಾರಿಗಳಾದ ನಿರ್ಮಲಾ ಹೆಚ್.ಹೂಸೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೇತುವೆ ತಡೆಗೋಡೆ ನಿರ್ಮಾಣಕ್ಕೆ ಪರಶುರಾಮ್ ಚಲವಾದಿ ಒತ್ತಾಯ

**ನೈಜ್ಯ ದೆಸೆ ನ್ಯೂಸ್**

**ಮುದ್ದೇಬಿಹಾಳ: ತಾಲೂಕಿನ ಹೀರೆಮುರಾಳದಿಂದ ನಾಲತವಾಡಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಯ ಸೇತುವೆಯ ಮೇಲಿನ ತಡೆಗೋಡೆಗಳು ಸಂಪೂರ್ಣವಾಗಿ ನಾಶವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ತೀವ್ರ ಆತಂಕ ವ್ಯಕ್ತವಾಗಿದೆ. ಈ ಕುರಿತು ಕರ್ನಾಟಕ ಭೀಮಸೇನೆ ಜಿಲ್ಲಾ ಸಮಿತಿಯ ಯುವ ಘಟಕ ಅಧ್ಯಕ್ಷ ಪರಶುರಾಮ್ ಚಲವಾದಿ ಅವರು ಪತ್ರಿಕಾ ಪ್ರಕಟಣೆ ನೀಡಿ, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಸೇತುವೆಯ ತಡೆಗೋಡೆಗಳನ್ನು ದುರಸ್ತಿ ಮಾಡಬೇಕು ಎಂದು**



**ಆಗ್ರಹಿಸಿದ್ದಾರೆ.**

"ಈ ರಸ್ತೆ ದಿನನಿತ್ಯ ನೂರಾರು ವಾಹನಗಳ ಸಂಚಾರ ಹೊಂದಿದ್ದು, ಸೇತುವೆಯ ಎರಡೂ ಬದಿಯ ತಡೆಗೋಡೆಗಳು ಸಂಪೂರ್ಣ ಕುಸಿದು ಹೋಗಿವೆ. ರಾತ್ರಿ ವೇಳೆ ಹಾಗೂ ಮಳೆಗಾಲದಲ್ಲಿ ವಾಹನ ಸವಾರರಿಗೆ ಭಾರಿ ಅಪಾಯ ಉಂಟಾಗುತ್ತಿದೆ. ಈಗಾಗಲೇ ಹಲವು ಸಣ್ಣಪುಟ್ಟ ಅಪಘಾತಗಳು ಸಂಭವಿಸಿದ್ದು, ದೊಡ್ಡ ಅನಾಹುತ ಸಂಭವಿಸುವ ಮುನ್ನವೇ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು" ಎಂದು ಅವರು ತಿಳಿಸಿದ್ದಾರೆ. ಇದೇ ವೇಳೆ ಸೇತುವೆಯ ಪಕ್ಕದಲ್ಲಿ ಗಿಡಗಂಟೆಗಳು ಹೆಚ್ಚಾಗಿ ಬೆಳೆಯುತ್ತಿರುವುದರಿಂದ ವಾಹನ ಸವಾರರ ದೃಷ್ಟಿಗೆ ಅಡ್ಡಿಯಾಗುತ್ತಿದೆ. ರಸ್ತೆ ಬದಿಯ ಸ್ವಚ್ಛತೆ ಇಲ್ಲದ ಕಾರಣ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ. ಸಂಬಂಧಪಟ್ಟ ಇಲಾಖೆ ತಕ್ಷಣವೇ ಗಿಡಗಂಟೆಗಳನ್ನು ತೆರವುಗೊಳಿಸಿ, ಸಂಪೂರ್ಣ ಸ್ವಚ್ಛತೆ ಮಾಡಿಸಿ ಸುರಕ್ಷಿತ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

"ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಸಮಸ್ಯೆಯನ್ನು ಪರಿಹರಿಸದಿದ್ದಲ್ಲಿ, ಕರ್ನಾಟಕ ಭೀಮಸೇನೆ ಜಿಲ್ಲಾ ಸಮಿತಿಯಿಂದ ಹೋರಾಟ ಹಮ್ಮಿಕೊಳ್ಳಲಾಗುವುದು" ಎಂದು ಎಚ್ಚರಿಕೆ ನೀಡಿದ್ದಾರೆ. ಮುಂದೆ ಯಾವುದೇ ಅನಾಹುತ ಸಂಭವಿಸದಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಮಾ.10ರಿಂದ ವಿಶೇಷ ಬಸ್ಸುಗಳ ಕಾರ್ಯಾಚರಣೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಮಾರ್ಚ 16ರಿಂದ ಮಾರ್ಚ 20ರವರೆಗೆ ಯುಗಾದಿ ಹಬ್ಬದ ಪ್ರಯುಕ್ತ ಶ್ರೀಶೈಲಂ ಶ್ರೀಮಲ್ಲಿಕಾರ್ಜುನ ಜಾತ್ರಗೆ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ 280 ವಿಶೇಷ ಬಸ್ಸುಗಳ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ.**

ಮಾರ್ಚ್ 16 ರಿಂದ 20ರವರೆಗೆ ಶ್ರೀಶೈಲಂ ಜಾತ್ರೆ ನಡೆಯುತ್ತಿದೆ. ಅಲ್ಲದೆ ಮಾರ್ಚ್ 19 ರಂದು ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವ ಜರುಗಲಿದೆ. ರಾಯಚೂರು–ಕರ್ನೂಲ್–ಶ್ರೀಶೈಲ್, ಸಿಂಧನೂರು–ಆದೋನಿ–ಶ್ರೀಶೈಲ್, ಸಿಂಧನೂರು–ರಾಯಚೂರು–ಕರ್ನೂಲ್–ಶ್ರೀಶೈಲ್, ಲಿಂಗಸುಗೂರು–ಮಸ್ಕಿ–ಸಿಂಧನೂರು–ಆದೋನಿ–ಶ್ರೀಶೈಲ್, ಮಾನವಿ–





ಸಿಂಧನೂರು–ಕರ್ನೂಲ್–ಶ್ರೀಶೈಲ್, ಮಾನವಿ–ಸಿಂಧನೂರು–ಆದೋನಿ–ಶ್ರೀಶೈಲ್, ಮಸ್ಕಿ–ರಾಯಚೂರು–ಕರ್ನೂಲ್–ಶ್ರೀಶೈಲ್, ಮಸ್ಕಿ–ಸಿಂಧನೂರು–ಆದೋನಿ–ಶ್ರೀಶೈಲ್, ದೇವದುರ್ಗ–ರಾಯಚೂರು–ಕರ್ನೂಲ್–ಶ್ರೀಶೈಲ್ ಮಾರ್ಗವಾಗಿ ಬಸ್‌ಗಳು ಸಂಚಾರ ಮಾಡಲಿವೆ. 50 ಪ್ರಯಾಣಿಕರು ಲಭ್ಯವಿದ್ದಲ್ಲಿ ಅವರ ಸ್ವ–ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸಲಾಗುವುದು.

ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವುದಕ್ಕೆ ಇಷ್ಟಪಟ್ಟಲ್ಲಿ ನಿಗದಿತ ಟಿಕೇಟ್ ದರದಂತೆ ಬಸ್ ಸೌಲಭ್ಯ ಒದಗಿಸಲಾಗುತ್ತಿದ್ದು, ಶ್ರೀ ಶ್ರೀಶೈಲಂ ಹೋಗಿ ಬರುವ ಪ್ರಯಾಣಿಕರು, ಈ ವಿಷೇಶ ಬಸ್ಸುಗಳ ಸೌಕರ್ಯವನ್ನು ಪಡೆದುಕೊಳ್ಳುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಯಚೂರು–1ನೇ ಘಟಕ ಮೊಬೈಲ್ ಸಂಖ್ಯೆ: 7760992363, ರಾಯಚೂರು–2ನೇ ಘಟಕ ಮೊಬೈಲ್ ಸಂಖ್ಯೆ: 7760992364, ರಾಯಚೂರು–3ನೇ ಘಟಕ ಮೊಬೈಲ್ ಸಂಖ್ಯೆ: 7619351087, ಲಿಂಗಸುಗೂರು ಘಟಕ ಮೊಬೈಲ್ ಸಂಖ್ಯೆ: 7760992365, ಸಿಂಧನೂರು ಘಟಕ ಮೊಬೈಲ್ ಸಂಖ್ಯೆ: 7760992366, ಮಾನವಿ ಘಟಕ ಮೊಬೈಲ್ ಸಂಖ್ಯೆ: 7760992367, ದೇವದುರ್ಗ ಘಟಕ ಮೊಬೈಲ್ ಸಂಖ್ಯೆ: 7760992368, ಮಸ್ಕಿ ಘಟಕ ಮೊಬೈಲ್ ಸಂಖ್ಯೆ: 7760992361, ಕೇಂದ್ರ ಬಸ್ ನಿಲ್ದಾಣ ರಾಯಚೂರು ಮೊಬೈಲ್ ಸಂಖ್ಯೆ: 7760992370 ಅಥವಾ ವಿಭಾಗೀಯ ಸಂಚಾರ ಅಧಿಕಾರಿ ಮೊಬೈಲ್ ಸಂಖ್ಯೆ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ್ ಎಂ.ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೆಲೆ ಇಲ್ಲದ ಅಸ್ವಸ್ಥನಿಗೆ ಆಶ್ರಯ ಕಲ್ಪಿಸಿ ಕೊಟ್ಟ ಕಾರುಣ್ಯಾಶ್ರಮ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ಮಸ್ಕಿ ತಾಲೂಕಿನ ಬಳಗಾನೂರ ಪೊಲೀಸ್ ಠಾಣೆಯ ಪಿ.ಎಸ್.ಐ. ಅಧಿಕಾ–ರಿಗಳಾದ ಯರಿಯಪ್ಪ ಅಂಗಡಿ ಇವರ ಸಲಹೆಯಂತೆ ಬಳಗಾನೂರು ಪಟ್ಟಣದಲ್ಲಿ ಸುಮಾರು ದಿನಗಳಿಂದ ಅಪರಿಚಿತ ವ್ಯಕ್ತಿಯಾಗಿ ಓಡಾಡುತ್ತಿದ್ದ ವಿಜಯ್ ತಂ. ಜೋಲು ತೊಂಟು ಬಾಯೀ ಕೊಲ್ಕತ್ತಾ (ವೆಸ್ಟ್ ಬೆಂಗಾಲ್)ವಯಸ್ಸು–40 ಇವರನ್ನು ಪೊಲೀಸ ಅಧಿಕಾರಿಗಳು ಸುಮಾರು ಎರಡು ಮೂರು ದಿನಗಳ ಕಾಲ ಊಟೋಪಚಾರ ಮಾಡಿ ಆಶ್ರಯ ನೀಡಿ ಕಾರುಣ್ಯ ಆಶ್ರಮಕ್ಕೆ ಮಾಹಿತಿ ನೀಡಿದ್ದಾರೆ.**

ನಂತರ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯ ಸ್ವಾಮಿ ಹಿರೇಮಠ ಅವರು ತಮ್ಮ ವಾಹನ ಸಿಬ್ಬಂದಿಗಳೊಂದಿಗೆ ಬಳಗಾನೂರು



ಪೊಲೀಸ್ ಠಾಣೆಗೆ ಭೇಟಿ ನೀಡಿ ಈ ವ್ಯಕ್ತಿಯನ್ನು ಆಶ್ರಮಕ್ಕೆ ಕರೆತಂದು ಆಶ್ರಯ ನೀಡಿದರು. ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವಸ್ವಾಮಿ ಹಿರೇಮಠ ಅವರು ಈ ವ್ಯಕ್ತಿಯು ಹೆಸರು ಮಾತ್ರ ಹೇಳುತ್ತಿದ್ದು ಇನ್ನೂ ಬೇರೆ ಯಾವುದೇ ವಿಷಯವನ್ನು ಹೇಳುತ್ತಿಲ್ಲ ಇಂತಹ ವ್ಯಕ್ತಿಗೆ ಮಾನವೀಯತೆಯ ದೃಷ್ಟಿಯಿಂದ ಬಳಗಾನೂರು ಪೊಲೀಸ್ ಠಾಣೆ ಪಿಎಸ್‌ಐ ಗಳಾದ ಯರಿಯಪ್ಪ ಅಂಗಡಿ ಹಾಗೂ ಸಿಬ್ಬಂದಿಗಳು ಸ್ವಂತ ಸಹೋದರರಾಗಿ ಎರಡು ಮೂರು ದಿನಗಳ ಕಾಲ ನೋಡಿಕೊಂಡಿರುವುದು.

ಪೊಲೀಸ್ ಇಲಾಖೆಯ ಸಾಮಾಜಿ–ಕ ಜವಾಬ್ದಾರಿಗೆ ಸಾರ್ವಜನಿಕರ ಮೆಚ್ಚುಗೆ ವ್ಯಕ್ತವಾಗಿರುವುದು ಸಮಾಜಕ್ಕೆ ಉತ್ತಮ ಸಂದೇಶ ಪೊಲೀಸ್ ಇಲಾಖೆಯ ಅಧಿಕಾ–ರಿಗಳು ತಮ್ಮ ಸ್ವಂತ ಕಾರ್ಯಕ್ರಮಗಳನ್ನು ಹಬ್ಬ ಹರಿದಿನಗಳನ್ನು ಮಾಡಿಕೊಳ್ಳದೆ ನಿರಂತರ ಸಾರ್ವಜನಿಕರ ಸೇವೆಯಲ್ಲಿ ತೊಡಗಿ ಜನ–ರಿಗೆ ಉತ್ತಮ ರೀತಿಯಿಂದ ಸ್ಪಂದಿಸುತ್ತಿರುವುದು ನಮ್ಮ ರಾಯಚೂರು ಜಿಲ್ಲಾ ಪೊಲೀಸ್ ಇಡೀ ರಾಜ್ಯದ ಜನರ ಪ್ರೀತಿಗೆ ಪಾತ್ರವಾಗಿದೆ ಕೆಲವೇ ತಿಂಗಳುಗಳ ಹಿಂದೆ ಕಾರುಣ್ಯ ಆಶ್ರಮಕ್ಕೆ 2005ನೇ ಬ್ಯಾಚ್ ನ ಪೊಲೀಸರು ಇಂತಹ ನಿರ್ಗತಿಕರ ಆಶ್ರಯಕ್ಕಾಗಿ ಆಶ್ರಯಧಾಮ ನಿರ್ಮಿಸಿ ಕೊಟ್ಟಿದ್ದಾರೆ.

ಮತ್ತು ರಾಯಚೂರು ಜಿಲ್ಲಾ ಪೊಲೀಸ್ ಅಧಿಕಾರಿಗಳು ನಿರಂತರವಾಗಿ ಕಾರುಣ್ಯ ಆಶ್ರಮಕ್ಕೆ ಸಹಾಯ ಸಹಕಾರ ಮಾಡುತ್ತಾ ಮಾರ್ಗದರ್ಶನ ನೀಡುತ್ತಿರುವುದು ನಮಗೆ ಇನ್ನೂ ಹೆಚ್ಚಿನ ಸೇವೆ ಮಾಡಲು ಅವಕಾಶ ಕಲ್ಪಿಸಿದಂತಾಗಿದೆ ಎಂದು ಮಾತನಾಡಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಗೆ ಧನ್ಯವಾದಗಳನ್ನು ತಿಳಿಸಿದರು. ಈ ಸಮಯದಲ್ಲಿ ಬಳಗಾನೂರು ಪೊಲೀಸ್ ಠಾಣೆಯ ಪಿ.ಎಸ್.ಐ.ಯರಿಯಪ್ಪ ಅಂಗಡಿ. ಹೆಡ್ ಕಾನ್ಸ್ಟೇಬಲ್ ಸಂಗಯ್ಯ ಸ್ವಾಮಿ. ಹೆಡ್ ಕಾನ್ಸ್ಟೇಬಲ್ ದೇವಪ್ಪ.ಪಿ. ಸಿ.ರೇವಣಸಿದ್ದಪ್ಪ. ಆಶ್ರಮದ ಸಿಬ್ಬಂದಿಗಳಾದ ಮ–ರಿಯಪ್ಪ ಮತ್ತು ಇನ್ನಿತರರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್

ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ (CSE) 4 ವರ್ಷಗಳ ಪದವಿಪೂರ್ವ (BE/BTech) ಕೋರ್ಸ್ ಆಗಿದ್ದು, ಸಾಫ್ಟ್‌ವೇರ್ ಅಭಿವೃದ್ಧಿ, ಪ್ರೋಗ್ರಾಮಿಂಗ್ ಭಾಷೆಗಳು, ಡೇಟಾ ರಚನೆಗಳು, ಅಲ್ಗಾರಿದಮ್‌ಗಳು ಮತ್ತು ಕಂಪ್ಯೂಟರ್ ಸಿಸ್ಟಮ್‌ಗಳ ವಿನ್ಯಾಸದ ಮೇಲೆ ಕೇಂದ್ರೀಕರಿಸುತ್ತದೆ. ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್, ಇದು ಬಹು ವೇದಿಕೆಗಳಿಗೆ ಪ್ರೊಸೆಸರ್ ಆರ್ಕಿಟೆಕ್ಚರ್‌ಗಳು, ಮೆಮೊರಿ ವ್ಯವಸ್ಥೆಗಳು, ಸಂಗ್ರಹಣೆ ಮತ್ತು ಸಂವಹನ ಜಾಲಗಳು ಸೇರಿದಂತೆ ಕಂಪ್ಯೂಟರ್ ವ್ಯವಸ್ಥೆಗಳ ಯೋಜನೆ, ವಿನ್ಯಾಸ, ವಿಶ್ಲೇಷಣೆ ಮತ್ತು ಒಟ್ಟಾರೆ ನಿರ್ವಹಣೆಯ ಮೂಲ ಪರಿಕಲ್ಪನೆಗಳ ಮೇಲೆ ಕೇಂದ್ರೀಕರಿಸುತ್ತದೆ. ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ಕೋರ್ಸ್‌ಗಳು ಕಂಪ್ಯೂಟರ್ ಹಾರ್ಡ್‌ವೇರ್ ಮತ್ತು ಸಾಫ್ಟ್‌ವೇರ್ ಸಿಸ್ಟಮ್‌ಗಳೆರಡನ್ನೂ ಒಳಗೊಂಡಿರುತ್ತವೆ ಮತ್ತು ಕಂಪ್ಯೂಟರ್ ಪ್ರೋಗ್ರಾಮಿಂಗ್ ಭಾಷೆಗಳು ಮತ್ತು ನೆಟ್‌ವರ್ಕಿಂಗ್ ಮೂಲಭೂತ ಅಂಶಗಳನ್ನು ಹೈಲೈಟ್ ಮಾಡುತ್ತವೆ. ಸೈದ್ಧಾಂತಿಕ ಜ್ಞಾನದ ಜೊತೆಗೆ, ಸಿಎಸ್‌ಇ ಕೋರ್ಸ್‌ಗಳು ಲ್ಯಾಬ್ ಸೆಷನ್‌ಗಳು, ಕಾರ್ಯಾಗಾರಗಳು ಮತ್ತು ಇಂಟರ್ನ್‌ಶಿಪ್‌ಗಳ ಮೂಲಕ ಪ್ರಾಯೋಗಿಕ ತರಬೇತಿಯನ್ನು ಒಳಗೊಂಡಿರುತ್ತವೆ. ಕೆಲವು ಜನಪ್ರಿಯ ಸಿಎಸ್‌ಇ ಎಂಜಿನಿಯರಿಂಗ್ ಕೋರ್ಸ್ ಆಯ್ಕೆಗಳಲ್ಲಿ ಸಿಎಸ್‌ಇಯಲ್ಲಿ ಬಿಟೆಕ್ , ಬಿಇ ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್, ಎಂಟೆಕ್ ಸಿಎಸ್‌ಇ, ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್‌ನಲ್ಲಿ ಪಿಎಚ್‌ಡಿ ಇತ್ಯಾದಿ ಸೇರಿವೆ. ಭಾರತದಲ್ಲಿ 6,800 ಕ್ಕೂ ಹೆಚ್ಚು ಎಂಜಿನಿಯರಿಂಗ್ ಕಾಲೇಜುಗಳು ವಿವಿಧ ಹಂತಗಳಲ್ಲಿ ಸಿಎಸ್ ಎಂಜಿನಿಯರಿಂಗ್ ಕೋರ್ಸ್‌ಗಳಈ ಕ್ಷೇತ್ರವು ಸಾಫ್ಟ್‌ವೇರ್, ಡೇಟಾ ಸೈನ್ಸ್, ಎಐ ಮತ್ತು ಕ್ಲೌಡ್ ಕಂಪ್ಯೂಟಿಂಗ್‌ನಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ ಕೋರ್ಸ್ ವಿವರಗಳು (Course Details): ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು). ಅರ್ಹತೆ: ಪಿಯುಸಿ/12ನೇ ತರಗತಿಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತ (PCM) ಕಡ್ಡಾಯ, ಕನಿಷ್ಠ 45–50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರವೇಶ ಪರೀಕ್ಷೆಗಳು: KCET, COMEDK, JEE Main. ಮುಖ್ಯ ವಿಷಯಗಳು: ಪ್ರೋಗ್ರಾಮಿಂಗ್ ಭಾಷೆಗಳು ಡೇಟಾ ಸ್ಟ್ರಕ್ಚರ್ ಮತ್ತು ಅಲ್ಗಾರಿದಮ್ಸ್ (Data Structures & Algorithms). ಡೇಟಾಬೇಸ್ ಮ್ಯಾನೇಜ್ಮೆಂಟ್ ಸಿಸ್ಟಮ್ (DBMS). ಆಪರೇಟಿಂಗ್ ಸಿಸ್ಟಮ್ಸ್ (Operating Systems). ಕಂಪ್ಯೂಟರ್ ನೆಟ್‌ವರ್ಕ್‌ಗಳು (Computer Networks). ಕೃತಕ ಬುದ್ಧಿಮತ್ತೆ ಮತ್ತು ಮಶಿನ್ ಲರ್ನಿಂಗ್ (AI & ML). ಕ್ಲೌಡ್ ಕಂಪ್ಯೂಟಿಂಗ್ ಉದ್ಯೋಗಾವಕಾಶಗಳು (ಅಚಿreer Opportunities): ಸಾಫ್ಟ್‌ವೇರ್ ಡೆವಲಪರ್/ಇಂಜಿನಿಯರ್: ಅಪ್ಲಿಕೇಶನ್‌ಗಳು ಮತ್ತು ಸಾಫ್ಟ್‌ವೇರ್ ವಿನ್ಯಾಸ. ಡೇಟಾ ಸೈಂಟಿಸ್ಟ್/ಅನಲಿಸ್ಟ್: ದೊಡ್ಡ ಡೇಟಾ ಸೆಟ್‌ಗಳನ್ನು ವಿಶ್ಲೇಷಿಸುವುದು. ಸಿಸ್ಟಮ್ ಆರ್ಕಿಟೆಕ್ಟ್: ಕಂಪ್ಯೂಟರ್ ಸಿಸ್ಟಮ್‌ಗಳ ವಿನ್ಯಾಸ. ವೆಬ್/ಮೊಬೈಲ್ ಡೆವಲಪರ್: ವೆಬ್‌ಸೈಟ್‌ಗಳು ಮತ್ತು ಆ?ಯಪ್‌ಗಳನ್ನು ನಿರ್ಮಿಸುವುದು. ಸೈಬರ್ ಸೆಕ್ಯುರಿಟಿ ಸ್ಪೆಷಲಿಸ್ಟ್: ಸಿಸ್ಟಮ್ ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು. ಕೌಶಲ್ಯಗಳು (Skills Required): ತಾರ್ಕಿಕ ಆಲೋಚನೆ ಮತ್ತು ಸಮಸ್ಯೆ ಪರಿಹರಿಸುವ ಸಾಮರ್ಥ್ಯ. ಪ್ರೋಗ್ರಾಮಿಂಗ್‌ನಲ್ಲಿ ಆಸಕ್ತಿ. ಹೊಸ ತಂತ್ರಜ್ಞಾನಗಳನ್ನು ಕಲಿಯುವ ಆಸಕ್ತಿ. ಉನ್ನತ ಶಿಕ್ಷಣ (Higher Education): MTech / MS (ಕಂಪ್ಯೂಟರ್ ಸೈನ್ಸ್).

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೇ ಓದಿರಿ.

# ಬೇಸಿಗೆಯ ಬಿಸಿಲಿನ ತಾಪ ಹೆಚ್ಚಳ: ಆರೋಗ್ಯ ಇಲಾಖೆಯಿಂದ ಸಾರ್ವಜನಿಕರಿಗೆ ಅತ್ಯುಪಯುಕ್ತ ಸಲಹೆಗಳು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಬೇಸಿಗೆ ಆರಂಭವಾಗಲಿದ್ದು, ಪ್ರಸಕ್ತ ವರ್ಷ ಬಿಸಿಲಿನ ತಾಪಮಾನವು ಹೆಚ್ಚಾಗುವ ಸಂಭವವಿದೆ ಎಂದು ಭಾರತೀಯ ಹವಮಾನ ಇಲಾಖೆಯ ನಿರಂತರ ಮುನ್ಸೂಚನೆ ಇರುವುದರಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಿಲ್ಲೆಯಲ್ಲಿ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಕೋರಿದ್ದಾರೆ.**



ಬಿಸಿಲಿನ ತಾಪಮಾನದಿಂದ ಹೇಗೆ ರಕ್ಷಿಸಿಕೊಳ್ಳಬೇಕು. ಮತ್ತು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗಾದಾಗ ತಕ್ಷಣ ಕೈಗೊಳ್ಳಬೇಕಾದ ಮುಂಜಾಗೃತೆ ಬಗ್ಗೆ ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರದ ನಿರ್ದೇಶನ ಹಾಗೂ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮದ ಮಾರ್ಗದರ್ಶನದಂತೆ ಈ ಕೆಳಕಂಡಂತೆ ಜಾಗೃತಿ ವಹಿಸಲು ಕೋರಲಾಗಿದೆ. ಏನು ಮಾಡಬೇಕು: ಮನೆಯ ಹೊರಗೆ ಹೋಗುವಾಗ ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಕೈಗೆಟುಕುವಂತೆ ಕುಡಿಯುವ ನೀರನ್ನು ಇಟ್ಟುಕೊಳ್ಳಿ. ಆಗಾಗ್ಗೆ ನಿಧಾನವಾಗಿ ಧಾರಾಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಹಣ್ಣಿನ ರಸ, ಪಾನಕಗಳನ್ನು ಕುಡಿಯಿರಿ.

ಹತ್ತಿಯ ನುಣುಪಾದ ಬಟ್ಟೆ, ಕರವಸ್ತ್ರ ಟಿಶ್ಯು ಪೇಪರ್‌ನಿಂದ ಬೆವರನ್ನು ಒರೆಸಿಕೊಳ್ಳಬೇಕು. ನೀರು, ಮಜ್ಜಿಗೆ ಎಳೆನೀರು ಕುಡಿಯಬಹುದು. ಆದಷ್ಟು ಮಸಾಲೆ ರಹಿತ, ಶುದ್ಧ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ. ಮನೆಯಿಂದ ಹೊರಗಡೆ ಹೋಗುವಾಗ ಜೊತೆಯಲ್ಲಿ ತಪ್ಪದೇ ಶುದ್ಧ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು. ವ್ಯಕ್ತಿ ತೊದಲು ಮಾತು ಅಥವಾ ಅರ್ಥರಹಿತವಾಗಿ ಬಡಬಡಿಸಿದ್ದಲ್ಲಿ, ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿರಿ. ಕೆಳಗೆ ಮಲಗಿಸಿ, ಕಾಲುಗಳನ್ನು ಮೇಲಕೆತ್ತಿ ಆರೈಕೆ ಮಾಡಿ.

ಆತ/ಆಕೆಯ ಹಣೆ, ಕತ್ತು, ಪಾದ ತೊಡೆಯ ಸಂದುಗಳನ್ನು ಒದ್ದೆ ಬಟ್ಟೆಯಿಂದ ಒರೆಸಿರಿ (ತಂಪಾದ ಅಥವಾ ಐಸ್ ನೀರಿನಿಂದ ಒರೆಸಬೇಡಿ) ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ, ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀರ್ವ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು. ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು.

ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಬೇಕು. ಏನು ಮಾಡಬಾರದು: ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಸತತವಾಗಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ (ಬಾಯಾರಿಕೆಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ.

ಕಾಫಿ, ಟೀ, ಅತಿ ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮದ್ಯಪಾನ ವರ್ಜಿಸಬೇಕು. ಬಿಗಿಯಾದ ಗಾಳಿಯಾಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರ ಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ಹಾನಿಯಾಗುವ ಸಂಭವವಿರುತ್ತದೆ). ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸದೇ ಇರುವ ನೀರನ್ನು ಮತ್ತು ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬಾರದು.

ಕೈಗಳನ್ನು ತೊಳೆದುಕೊಳ್ಳದೇ ಆಹಾರವನ್ನು ಸೇವಿಸಬೇಡಿ, ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಬಯಲು ಪ್ರದೇಶಗಳಲ್ಲಿ ಮಲ, ಮೂತ್ರ ವಿಸರ್ಜನೆ ಮಾಡಬಾರದು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಮತ್ತು ಕತ್ತರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು. ತಯಾರಿಸಿದ ಆಹಾರವನ್ನು ಮುಚ್ಚಳದಿಂದ ಮುಚ್ಚಬೇಕು. ಶಾಖಾಘಾತದ ಲಕ್ಷಣಗಳು: ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಶಾಖಾಘಾತಕ್ಕೆ ಒಳಗಾಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಸ್ಪಷ್ಟವಿಲ್ಲದ ಮಾತು, ಅರೆಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ. ಶಾಖಾಘಾತಕ್ಕೆ ಚಿಕಿತ್ಸೆ: ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ ಅಂಗಾತ ಮಲಗಿಸಿಬೇಕು. ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಅತಿ ಅಗತ್ಯವೆನಿಸಿದರೆ ಹತ್ತಿರದ ವೈದ್ಯರ ಬಳಿ ತಕ್ಷಣವೇ ಕರೆದುಕೊಂಡು ಹೊಗಬೇಕು. ಯಾವುದೇ ತುರ್ತು ವಾಹನಕ್ಕಾಗಿ (ಆಯಂಬ್ಯುಲೆನ್ಸ್) 108ಕ್ಕೆ ಕರೆ ಮಾಡಿ ಸದುಪಯೋಗ ಪಡೆಯಬೇಕು. ಈಗಾಗಲೇ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ಹಾಗೂ ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಿ ಜನತೆಗೆ ಜಾಗೃತಿ ನೀಡಲು ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ಕರ್ನಾಟಕ ಮಾಧ್ಯಮ ಅಕಾಡೆಮಿಯ ತರಬೇತಿಗೆ ಪತ್ರಕರ್ತೆಯರಿಂದ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ಮಾಧ್ಯಮ ಅಕಾಡೆಮಿಯು ಇನ್ಫೋಸಿಸ್ ಸ್ಪಿಂಗ್ ಬೋರ್ಡ್ ಸಿ.ಎಸ್.ಆರ್. ಕಾರ್ಯಕ್ರಮದಡಿ ಮಹಿಳಾ ಪತ್ರಕರ್ತೆಯರಿಗಾಗಿಯೇ ವಿಶೇಷವಾಗಿ ತರಬೇತಿ ಆಯೋಜಿಸಿದ್ದು, ಪತ್ರಕರ್ತೆಯರಿಂದ ಅರ್ಜಿ ಆಹ್ವಾನಿಸಿದೆ. ತರಬೇತಿಯು ಮಾರ್ಚ್ 25 ರಿಂದ 27ರ ವರೆಗೆ ಮೈಸೂರಿನ ಇನ್‌ಪೋಸಿಸ್ ಕ್ಯಾಂಪಸ್‌ನಲ್ಲಿ ನಡೆಯಲಿದೆ.**




ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ 5 ವರ್ಷ ಸೇವಾನುಭವ ಹೊಂದಿರುವ ಪತ್ರಕರ್ತೆಯರು ಅರ್ಜಿ ಸಲ್ಲಿಸಬಹುದು. ಆಸಕ್ತ ಪತ್ರಕರ್ತೆಯರು ಗೂಗಲ್ ಫಾರ್ಮ್ https://forms.gle/tozr4GxUQibDHBvk9 ನಲ್ಲಿ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವ ಮೂಲಕ ತರಬೇತಿಗೆ ನೋಂದಾಯಿಸಬಹುದಾಗಿದೆ. ಅರ್ಜಿ ನಮೂನೆಯಲ್ಲಿ ಸೂಚಿಸಿರುವಂತೆ ಪತ್ರಕರ್ತೆಯರು ಭಾವಚಿತ್ರ, ವಯಸ್ಸಿನ ದಾಖಲೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ ಅಥವಾ ಕಚೇರಿಯ ಅಧಿಕೃತ ಗುರುತಿನಚೀಟಿ, ಸದರಿ ಮಾಧ್ಯಮ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಕುರಿತ ದಾಖಲೆ ಹಾಗೂ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರುವ ಕುರಿತು ಸೇವಾನುಭವ ದಾಖಲೆಗಳನ್ನು ಸಲ್ಲಿಸಬೇಕು.

ಇದು ಮೂರು ದಿನಗಳ ವಸತಿಯುತ ತರಬೇತಿಯಾಗಿದ್ದು, ಪತ್ರಕರ್ತೆಯರಿಗೆ ನಿಯಮಾನುಸಾರ ಪ್ರಯಾಣ ಭತ್ಯೆ ನೀಡಲಾಗುವುದು. ಈ ತರಬೇತಿ ಕಾರ್ಯಕ್ರಮದಲ್ಲಿ ಡಿಜಿಟಲ್ ಮಾಧ್ಯಮ, ಎಐ ಬಳಕೆ ಹಾಗೂ ಸಾಫ್ಟ್‌ಸ್ಕಿಲ್ ಅಭಿವೃದ್ಧಿ ಮತ್ತು ನಾಯಕತ್ವ ತರಬೇತಿ ನೀಡಲಾಗುವುದು. ಪತ್ರಕರ್ತೆಯರ ಆಯ್ಕೆ ಕುರಿತ ಅಂತಿಮ ನಿರ್ಧಾರ ಅಕಾಡೆಮಿಯದ್ದೇ ಆಗಿರುತ್ತದೆ. ಆಸಕ್ತರು ಅರ್ಜಿಯನ್ನು ಸಲ್ಲಿಸಲು ಮಾರ್ಚ್ 10 ಕೊನೆಯ ದಿನವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಎಸ್ ಎಸ್ ಎಲ್ ಸಿ ಪರೀಕ್ಷಾ ಫಲಿತಾಂಶ ಸುಧಾರಿಸಿ: ಚಂದ್ರಶೇಖರ ದೊಡ್ಡಮನಿ ಬಿಇಓ



ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಗ್ರಾಮದ ಸರಕಾರಿ ಪ್ರೌಢಶಾಲೆಗೆ ಮಾನ್ವಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಚಂದ್ರಶೇಖರ ದೊಡ್ಡಮನಿ ಯವರು ಭೇಟಿ ನೀಡಿದರು.**

ಇದೇ ತಿಂಗಳು ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಗಳು ನಡೆಯಲಿದ್ದು, ಅದುಕ್ಕೋಸ್ಕರ ಇಂದು ಪೂರ್ವಭಾವಿ ಸಭೆಯನ್ನು ನಡೆಸಿ ಈಗಾಗಲೇ ಪೂರ್ವ ಸಿದ್ಧತೆ ಪರೀಕ್ಷೆಗಳು ಒಂದು, ಎರಡು ಮತ್ತು ಮೂರು ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಮಕ್ಕಳೊಂದಿಗೆ ಸುಧೀರ್ಘವಾಗಿ ಚರ್ಚೆ ನಡೆಸಿ ಬರುವಂತಹ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಮಾಡುವ ಮೂಲಕ ಕಲಿತ ಶಾಲೆಗೆ, ನಿಮ್ಮ ಗ್ರಾಮಕ್ಕೆ, ತಂದೆ ತಾಯಿಗಳಿಗೆ ಹೆಸರು ತರುವಂತ ಕೆಲಸ ಮಾಡಬೇಕು ಎಂದು ವಿದ್ಯಾರ್ಥಿಗಳೊಂದಿಗೆ ಊಟ ಮಾಡುತ್ತಾ ಹೇಳಿದರು . ಹಾಗೆ ವಿಷಯವಾರು ಶಿಕ್ಷಕರೊಂದಿಗೆ ಚರ್ಚಿಸಿ ಗುಣಮಟ್ಟದ ಫಲಿತಾಂಶ ಸುಧಾಣೆಗಾಗಿ ಸೂಕ್ತ ಮಾರ್ಗದರ್ಶನ ಬಿಇಓ ಚಂದ್ರಶೇಖರ್ ದೊಡ್ಡಮನಿ ಮಾತನಾಡಿದರು. ಈ ಸಂದರ್ಭದಲ್ಲಿ ಮುಖ್ಯಗುರು ಸುಭಾಷ್ ಸಿಂಗ್ ಹಜಾರೆ ಹಾಗೂ ಶಿಕ್ಷಕರು ಇದ್ದರು.

# ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಮಾರ್ಚ್ 6ರಂದು ರಾಯಚೂರಲ್ಲಿ ಬೃಹತ್ ನಶಾ ಮುಕ್ತ ಭಾರತ ಅಭಿಯಾನ, ವಾಕಥಾನ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲಾ ವ್ಯಾಪ್ತಿಯ ರಾಜೀವ್ ಗಾಂಧಿ ಆರೋಗ್ಯ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕಕ್ಕೆ ಸಂಯೋಜನೆಗೊಳಪಟ್ಟಿರುವ ಕಾಲೇಜುಗಳ ಸಂಘ, ಭಾರತ ಸರ್ಕಾರದ ಗೃಹ ಮಂತ್ರಾಲಯ ಅಧೀನದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ದಿಶಾಬೋಧ್ ಫೌಂಡೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದಲ್ಲಿ ನಶಾಮುಕ್ತ ಭಾರತ, ಯುವ ಶುದ್ಧಿ ಅಭಿಯಾನ ವಾಕಥಾನ್, ಸ್ವಾಸ್ಥ ಯ ಭಾರತ ಶ್ರೇಷ್ಠ ಭಾರತ ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್, ಆತ್ಮಹತ್ಯೆ ಮುಕ್ತ ಕ್ಯಾಂಪಸ್ ಅಂಗಾಂಗ ದಾನ ಅಭಿಯಾನ ಕಾರ್ಯಕ್ರಮವನ್ನು ಮಾರ್ಚ್ 6ರಂದು ಹಮ್ಮಿಕೊಳ್ಳಲಾಗಿದೆ ಎಂದು ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶ ಬಿ.ಹೆಚ್ ಅವರು ಹೇಳಿದರು.**



ಮಾರ್ಚ್ 04ರ ಬುಧವಾರ ನಗರದ ರಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಅಂದು ಬೆಳಗ್ಗೆ 7.30ಕ್ಕೆ ಎಸ್‌ಪಿ ಫರೇಡ್ ಮೈದಾನದಿಂದ ಜಾಥಾ ವಾಕಥಾನ್ ಆರಂಭವಾಗಿ ಗಾಂಧಿ ಚೌಕ್, ಬಸವೇಶ್ವರ ವೃತ್ತ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಸಾಗಿ ನಗರದ ಮಹಾತ್ಮ ಗಾಂಧೀ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರುವುದು. ಈ ಬೃಹತ್ ವಾಕಥಾನಕ್ಕೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಲಯನ್ಸ್ ಕ್ಲಬ್, ರೋಟರಿ ಕ್ಲಬ್ ಸೇರಿದಂತೆ ವಿವಿಧ ಸಂಸ್ಥೆಗಳು ಸಹಕಾರ ನೀಡಿದ್ದು ಬೃಹತ್ ವಾಕ್‌ಥಾನದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಅಂದಾಜು 5000 ಜನರು ಸೇರಲಿದ್ದಾರೆ.

ಯುವ ಜನತೆಯನ್ನು ಮಾದಕ ವಸ್ತುಗಳ ದುಷ್ಪರಿಣಾಮಗಳಿಂದ ರಕ್ಷಿಸಿ, ಜವಾಬ್ದಾರಿಯುತ ಮತ್ತು ಮೌಲ್ಯಾಧಾರಿತ ಕ್ಯಾಂಪಸ್‌ಗಳನ್ನು ನಿರ್ಮಿಸಲು ಮಾರ್ಚ್ 6ರಂದು ನಡೆಯುವ ಈ ಅಭಿಯಾನದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಅವರು ಮನವಿ ಮಾಡಿದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ದಿಶಾಬೋಧ್ ಫೌಂಡೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರುಗಳ ಸಂಯುಕ್ತ ಮುಂದಾಳತ್ವದಲ್ಲಿ ನಶಾ ಮುಕ್ತ ಭಾರತ್ ಯುವ ಶುದ್ಧಿ ಅಭಿಯಾನ ಎಂಬ ರಾಷ್ಟ್ರವ್ಯಾಪಿ ಮಹತ್ವಾಕಾಂಕ್ಷಿ ಚಳವಳಿ ಆರಂಭಿಸಲಾಗಿದೆ.

ಈ ಚಳವಳಿಯ ಉದ್ದೇಶ ಯುವಜನತೆಯನ್ನು ಮಾದಕ ವಸ್ತುಗಳ ದುಷ್ಪರಿಣಾಮಗಳಿಂದ ರಕ್ಷಿಸಿ, ಜವಾಬ್ದಾರಿಯುತ ಮತ್ತು ಮೌಲ್ಯಾಧಾರಿತ ಕ್ಯಾಂಪಸ್‌ಗಳನ್ನು ನಿರ್ಮಿಸುವುದಾಗಿದೆ. ಈ ಉಪಕ್ರಮಕ್ಕೆ 10 ಕೇಂದ್ರ ಸಚಿವಾಲಯಗಳು ಹಾಗೂ ರಾಜ್ಯ ಕಾನೂನು ಜಾರಿಗೊಳಿಸುವ ಸಂಸ್ಥೆಗಳ ಸಹಕಾರವೂ ಇದೆ ಎಂದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಸಿ.ಭಗವಾನ್ ಅವರ ಮಾರ್ಗದರ್ಶನದಲ್ಲಿ ಈ ಚಳವಳಿ ಮುನ್ನಡೆಯುತ್ತಿದೆ. ಅವರ ದೃಷ್ಟಿಕೋನವು ವಿದ್ಯಾಭ್ಯಾಸದೊಂದಿಗೆ ಸಾಮಾಜಿಕ ಜವಾಬ್ದಾರಿ ಮತ್ತು ನೈತಿಕ ದೃಢತೆಯುಳ್ಳ ಕ್ಯಾಂಪಸ್‌ಗಳನ್ನು ನಿರ್ಮಿಸುವುದಾಗಿದೆ ಎಂದರು. ನಶಾ ಮುಕ್ತ ಭಾರತ್ ಯುವ ಶುದ್ಧಿ ಅಭಿಯಾನ ಒಂದು ಸಂಯೋಜಿತ ರಾಷ್ಟ್ರೀಯ ಯುವ ಜಾಗೃತಿ ಕಾರ್ಯಕ್ರಮವಾಗಿದ್ದು, ಭಾರತದಲ್ಲಿನ ಅತಿ ದೊಡ್ಡ ಮಾದಕ ವಸ್ತು ವಿರೋಧಿ ಚಳವಳಿಗಳಲ್ಲಿ ಒಂದಾಗಿದೆ. ಇದರಲ್ಲಿ 3 ಲಕ್ಷಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಹಾಗೂ ಅವರ ಕುಟುಂಬಗಳು ಭಾಗಿಯಾಗಿದ್ದಾರೆ ಎಂದರು.

ಯುವಜನರಲ್ಲಿ ಮಾದಕ ವಸ್ತು ಬಳಕೆಯ ವಿರುದ್ಧ ಜಾಗೃತಿ ಹಾಗೂ ಪ್ರತಿರೋಧ ಸೃಷ್ಟಿಸುವುದು. ಜವಾಬ್ದಾರಿಯುತ ಮತ್ತು ರಾಷ್ಟ್ರಜಾಗೃತ ನಾಗರಿಕರನ್ನು ಬೆಳೆಸುವುದು. ಒತ್ತಡ, ಸ್ನೇಹಿತರ ಪ್ರಭಾವ ಮತ್ತು ಸಾಮಾಜಿಕ ಪರಿಣಾಮಗಳಂತಹ ಆಧುನಿಕ ಸವಾಲುಗಳನ್ನು ಎದುರಿಸಲು ಮಾರ್ಗದರ್ಶನ, ಮಾದಕ ವಸ್ತು ವಿತರಣೆಯ ಮೂಲಕ ಯುವಜನರನ್ನು ಗುರಿಯಾಗಿಸುವ ಸಂಘಟಿತ ಜಾಲಗಳ ಬಗ್ಗೆ ಜಾಗೃತಿ, ಮಹಿಳಾ ವಿದ್ಯಾರ್ಥಿನಿಯರಿಗೆ ಸುರಕ್ಷಿತ ಮತ್ತು ಬೆಂಬಲದಾಯಕ ಕ್ಯಾಂಪಸ್ ವಾತಾವರಣ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದರು. ಈ ವೇಳೆ ರಿಮ್ಸ್ನ ಸಹಾಯಕ ಪ್ರಾಧ್ಯಾಪಕರಾದ ಡಾ. ಸುಶ್ರಿತ್ ಅವರು ಮಾತನಾಡಿ, ಅಂಗದಾನ ಕ್ಯಾಂಪಸ್ ಎಂಬ ಪರಿಕಲ್ಪನೆಯನ್ನು ಉತ್ತೇಜಿಸಿ, ಮಾನವೀಯ ಜವಾಬ್ದಾರಿಯಂತೆ ಅಂಗದಾನ ಜಾಗೃತಿಗೆ ಯುವಜನರನ್ನು ಪ್ರೇರೇಪಿಸಲಾಗುತ್ತಿದೆ.

ಶ್ರೀ ಶಿವನಾಗಿ ರೆಡ್ಡಿ ಅವರ ನೇತೃತ್ವದಲ್ಲಿ ದಿಶಾಬೋಧ್ ಫೌಂಡೇಶನ್ ಕಳೆದ ಎರಡು ವರ್ಷಗಳಿಂದ ಯುವಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದೆ. ಈ ಅಭಿಯಾನದ ವಿಸ್ತರಣೆಯ ಭಾಗವಾಗಿ, ರಾಯಚೂರು ನಗರದಲ್ಲಿ ಮುಂದಿನ ಪ್ರಮುಖ ಕಾರ್ಯಕ್ರಮ ನಡೆಯಲಿದೆ. ವಿದ್ಯಾರ್ಥಿಗಳು, ಪೋಷಕರು, ಶಿಕ್ಷಣ ಸಂಸ್ಥೆಗಳು ಹಾಗೂ ಸಮುದಾಯ ನಾಯಕರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಮಾದಕ ವಸ್ತು ರಹಿತ, ಜವಾಬ್ದಾರಿಯುತ ಮತ್ತು ರಾಷ್ಟ್ರಭಕ್ತ ಯುವ ಚಳವಳಿಯನ್ನು ಬಲಪಡಿಸಲಾಗುತ್ತದೆ. ಅಲ್ಲದೆ ಕಾರ್ಯಕ್ರಮದ ಮೂಲಕ ಮಾದಕ ವಸ್ತು ರಹಿತ ಮತ್ತು ಸಾಮಾಜಿಕವಾಗಿ ಜವಾಬ್ದಾರಿಯುತ ಕ್ಯಾಂಪಸ್ ಸಂಸ್ಕೃತಿಯನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ನವೋದಯ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ದೇವಾನಂದ, ಹೃದ್ರೋಗ ತಜ್ಞರು ಹಾಗೂ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಭಾರಿ ವಿಶೇಷಾಧಿಕಾರಿ ಡಾ. ಮುರಳಿ ರಾವ್, ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಚಂದ್ರಶೇಖರ ರೆಡ್ಡಿ, ನವೋದಯ ದಂತ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಗಿರೀಶ್ ಕಟ್ಟಿ, ಶಿವಂ ನರ್ಸಿಂಗ್ ಕಾಲೇಜಿನ ಆಡಳಿತಾಧಿಕಾರಿ ರವಿ ಪಾಟೀಲ್, ನಂದಿನಿ ನರ್ಸಿಂಗ್ ಕಾಲೇಜಿನ ಉಪನ್ಯಾಸಕಿ ಸುಮಲತಾ, ಸ್‌ಎಮ್‌ಇಎಸ್ ದಂತ ವೈದ್ಯಕೀಯ ಕಾಲೇಜಿನ ಉಪ ಪ್ರಾಂಶುಪಾಲರಾದ ಡಾ.ರಾಘವೇಂದ್ರ ಸೇರಿದಂತೆ ಇತರರು ಇದ್ದರು.